ಸಂಪುಟ: 11 ಸಂಚಿಕೆ: 162 ಪುಟ: 4+2 ಬೆಲೆ : 3.00 ಶುಕ್ರವಾರ, ಜುಲೈ 31, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 162 Pages : 4+2 Rate : 3.00 Friday July 31, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

ಕರ್ತವ್ಯ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ಸಹಿಸುವುದಿಲ್ಲ | ಅಧಿಕಾರಿಗಳಿಗೆ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ. ಎಚ್ಚರಿಕೆ


# ಬಾಕಿ ಕಡತಗಳ ತ್ವರಿತ ವಿಲೇವಾರಿಗೆ ಸೂಚನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಸಾರ್ವಜನಿಕ ಸೇವೆ ಹಾಗೂ ಬಾಕಿ ಕಡತಗಳ ವಿಲೇವಾರಿಯಲ್ಲಿ ಯಾವುದೇ ಕಾರಣಕ್ಕೂ ಅನಗತ್ಯ ವಿಳಂಬ ಮಾಡಬಾರದು. ಕರ್ತವ್ಯ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ. ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಕಂದಾಯ ಆಡಳಿತ ಹಾಗೂ ಇಲಾಖಾ ಕಾರ್ಯಕಲಾಪಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಭೆಯಲ್ಲಿ ಇಲಾಖಾವಾರು ಪ್ರಗತಿ ಪರಿಶೀಲನೆ ನಡೆಸಿದ ಅವರು, ವಿವಿಧ ಇಲಾಖೆಗಳಲ್ಲಿ ಬಾಕಿ ಉಳಿದಿರುವ ಆಡಳಿತಾತ್ಮಕ ಕಡತಗಳು, ಸಾರ್ವಜನಿಕ ಅರ್ಜಿಗಳು ಹಾಗೂ ಭೂ-ಕಂದಾಯ ಸಂಬಂಧಿತ ಪ್ರಸ್ತಾವನೆಗಳ ಬಗ್ಗೆ ಸುದೀರ್ಘ ಚರ್ಚೆ ನಡೆಸಿದರು. ಹಲವು ತಿಂಗಳುಗಳಿಂದ ಹಾಗೂ ವರ್ಷಗಳಿಂದ ಬಾಕಿ



ಉಳಿದಿರುವ ಕಡತಗಳನ್ನು ನಿಯಮಾನುಸಾರ ತಕ್ಷಣ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕಡತಗಳ ಪರಿಶೀಲನೆ ವೇಳೆ ಅಗತ್ಯ ದಾಖಲೆಗಳನ್ನು ಸಮರ್ಪಕವಾಗಿ ಪರಿಶೀಲಿಸಬೇಕು. ಆಡಳಿತಾತ್ಮಕ ಅಥವಾ ತಾಂತ್ರಿಕ ಲೋಪಗಳಿದ್ದರೆ ತಕ್ಷಣವೇ ಸರಿಪಡಿಸಬೇಕು. ಮಾಹಿತಿ ಹಕ್ಕು ಕಾಯ್ದೆ (ಆರ್‌ಟಿಐ) ಹಾಗೂ ಮೇಲ್ಮನವಿಗಳಿಗೆ ನಿಗದಿತ ಅವಧಿಯೊಳಗೆ ನಿಖರ ಮಾಹಿತಿ ನೀಡಬೇಕು.

ಅರ್ಜಿಗಳನ್ನು ಅನಗತ್ಯವಾಗಿ ಮುಂದೂಡುವ ಪ್ರವೃತ್ತಿ ಸಲ್ಲದು ಎಂದು ತಿಳಿಸಿದರು. ಅಧಿಕಾರಿಗಳು ಕಚೇರಿ ಕೆಲಸಕ್ಕೆ ಮಾತ್ರ ಸೀಮಿತವಾಗದೆ ಅಗತ್ಯವಿದ್ದಲ್ಲಿ ಸ್ಥಳ ಪರಿಶೀಲನೆ ನಡೆಸಬೇಕು. ಉಪವಿಭಾಗ ಮಟ್ಟದಲ್ಲಿ ನಿಯಮಿತ ಸಭೆಗಳನ್ನು ನಡೆಸಿ ಕಂದಾಯ ಇಲಾಖೆಯ ಕಾರ್ಯಗಳನ್ನು ಚುರುಕುಗೊಳಿಸುವಂತೆ ಸೂಚಿಸಿದರು.

**ಮುಜರಾಯಿ ದೇವಾಲಯಗಳಲ್ಲಿ ಪಾರದರ್ಶಕ ಆಡಳಿತಕ್ಕೆ ಒತ್ತು:** ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿರುವ ದೇವಾಲಯಗಳಲ್ಲಿ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಸೇವೆ ಒದಗಿಸಬೇಕು. ದೇವಾಲಯಗಳ ಸುರಕ್ಷತೆಗಾಗಿ ಕಡ್ಡಾಯವಾಗಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ, ಆದಾಯ, ಹುಂಡಿ ಎಣಿಕೆ ಹಾಗೂ ವೆಚ್ಚದ ಲೆಕ್ಕಪತ್ರಗಳನ್ನು ನಿಯಮಿತವಾಗಿ ಪರಿಶೀಲಿಸಿ ಪಾರದರ್ಶಕತೆ ಕಾಪಾಡಬೇಕು ಎಂದು ಸೂಚಿಸಿದರು.

ಅರ್ಚಕರು ಹಾಗೂ ದೇವಾಲಯಗಳ ಆಸ್ತಿ-ಪಾಸ್ತಿಗೆ ಸಂಬಂಧಿಸಿದ ಆಧಾರ್ ಮತ್ತು ಆರ್‌ಟಿಸಿ (ಖಇ) ದಾಖಲೆಗಳನ್ನು ನವೀಕರಿಸುವಂತೆ ಹಾಗೂ ತಹಶೀಲ್ದಾರರು ದೇವಾಲಯಗಳ ಆಡಳಿತವನ್ನು ಖುದ್ದು ಪರಿಶೀಲಿಸುವಂತೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ತಾಲೂಕು ಮಟ್ಟದಲ್ಲಿ ಭೂ ಕಂದಾಯ ಪ್ರಕರಣಗಳು, ಆಕಾರ್‌ಬಂಧ್ ತಿದ್ದುಪಡಿ, ಖಾತೆ ಬದಲಾವಣೆ ಹಾಗೂ ಸಾರ್ವಜನಿಕ ಅರ್ಜಿಗಳ ತ್ವರಿತ ವಿಲೇವಾರಿಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.ಜಿಲ್ಲೆಯ ವಿವಿಧ ಮುಜರಾಯಿ ದೇವಾಲಯಗಳಲ್ಲಿ ಭಕ್ತರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಪ್ರಾದೇಶಿಕ ಆಯುಕ್ತರು ನೀಡಿರುವ ಎಲ್ಲ ಸೂಚನೆಗಳನ್ನು ಶೀಘ್ರ ಜಾರಿಗೊಳಿಸಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರು, ವಿವಿಧ ತಾಲೂಕುಗಳ ತಹಶೀಲ್ದಾರರು, ಮುಜರಾಯಿ ಇಲಾಖೆ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> ಸಾರ್ವಜನಿಕ ಸೇವೆ ಮತ್ತು ಬಾಕಿ ಕಡತಗಳ ವಿಲೇವಾರಿಯಲ್ಲಿ ವಿಳಂಬಕ್ಕೆ ಅವಕಾಶವಿಲ್ಲ. ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ನಿರ್ವಹಿಸಿ, ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಬೇಕು.
> – **ಜಾನಕಿ ಕೆ.ಎಂ.,** ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ

## ನಾಳೆ ಗದಗದಲ್ಲಿ ವ್ಯಸನಮುಕ್ತ ದಿನಾಚರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಮ.ನಿ.ಪ್ರ. ಡಾ. ಮಹಾಂತ ಶಿವಯೋಗಿಗಳ ಜನ್ಮದಿನದ ಅಂಗವಾಗಿ ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮವನ್ನು ಆಗಸ್ಟ್ 1ರಂದು ಬೆಳಿಗ್ಗೆ 10 ಗಂಟೆಗೆ ಗದಗ-ಬೆಟಗೇರಿಯ ಹಾಕಿ ಕ್ರೀಡಾಂಗಣ ಸಮೀಪದ ಆದರ್ಶ ಶಿಕ್ಷಣ ಸಮಿತಿಯ ಸುವರ್ಣ ಮಹೋತ್ಸವ ಭವನದಲ್ಲಿ ಆಯೋಜಿಸಲಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಆದರ್ಶ ಶಿಕ್ಷಣ ಸಮಿತಿಯ ಡಿ.ಎಸ್. ಕುರ್ತಕೋಟಿ ಮೆಮೋರಿಯಲ್ ಪಿಯು ಕಾಲೇಜು ಸಂಯುಕ್ತ ಆಶ್ರಯದಲ್ಲಿ ಕಾರ್ಯಕ್ರಮ ನಡೆಯಲಿದೆ. ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಘನ ಉಪಸ್ಥಿತಿ ವಹಿಸಲಿದ್ದು, ಗದಗ ಶಾಸಕ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸಿ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸರ್ಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಡಿ.ಆರ್. ಪಾಟೀಲ, ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಎಸ್.ವಿ. ಸಂಕನೂರ, ಪ್ರದೀಪ್ ಶೆಟ್ಟರ, ಅಕ್ಬರಸಾಬ ಬಬರ್ಜಿ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ ಹಾಗೂ ಎ.ಎಲ್. ಪೊತ್ನೀಸ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ ಹಾಗೂ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ. ಉಪಸ್ಥಿತರಿರುವರು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಕಾರ್ಯದರ್ಶಿ ಮಹೇಶ್ ಎಸ್.ಎನ್., ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಬಿ. ಮಡ್ಲೂರ ಹಾಗೂ ಡಿ.ಎಸ್. ಕುರ್ತಕೋಟಿ ಮೆಮೋರಿಯಲ್ ಕಾಲೇಜಿನ ಪ್ರಾಚಾರ್ಯ ಆರ್.ಆರ್. ಕುಲಕರ್ಣಿ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಕೋರಿದ್ದಾರೆ.

## ನಾಳೆ ಬೆಳ್ಳಟ್ಟಿ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

**ವಿಜಯಸಾಕ್ಷಿ ಸುದ್ದಿ, ಗದಗ**

110/33/11 ಕೆ.ವಿ. ಬೆಳ್ಳಟ್ಟಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಲಿಂಕ್‌ಲೈನ್ ಮಾರ್ಗಗಳ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಆಗಸ್ಟ್ 1ರಂದು (ಶನಿವಾರ) ಬೆಳಿಗ್ಗೆ 10ರಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ. 110/33/11 ಕೆ.ವಿ. ಬೆಳ್ಳಟ್ಟಿ ಉಪಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುವ ಎನಾರಕಾನ, 110 ಕೆ.ವಿ. ಆದಿತ್ಯ ಬಿರ್ಲಾ ಸೋಲಾರ್, 33 ಕೆ.ವಿ. ಜಾಲವಾಡಗಿ ನೀರು ಸರಬರಾಜು ಉಪಕೇಂದ್ರ, 33 ಕೆ.ವಿ. ಸೂರಣಗಿ ಉಪಕೇಂದ್ರ ಹಾಗೂ 33 ಕೆ.ವಿ. ಹೊಳೆಇಟಗಿ ಉಪಕೇಂದ್ರ ವ್ಯಾಪ್ತಿಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಿಗೆ ಸಂಪರ್ಕ ಹೊಂದಿರುವ ಎಲ್ಲಾ 11 ಕೆ.ವಿ. ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಜೆಸ್ಕಾಂಗೆ ಸಹಕರಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

ಲೀಡ್ಕರ್ ಕಾಲೋನಿಯಲ್ಲಿ ಕಂಪೌಂಡ್ ತೆರವು; ನಗರಸಭೆ ವಿರುದ್ಧ ನಿವಾಸಿಗಳ ಆಕ್ರೋಶ

# ಶ್ರೀಮಂತರಿಗೊಂದು ಕಾನೂನು... ಬಡವರಿಗೊಂದು ಕಾನೂನಾ?



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ಗಂಗಿಮಡಿ ಬಡಾವಣೆಯ ಲೀಡ್ಕರ್ ಕಾಲೋನಿಯಲ್ಲಿ ನಗರಸಭೆ ನಡೆಸಿದ ಅತಿಕ್ರಮಣ ತೆರವು ಕಾರ್ಯಾಚರಣೆ ತೀವ್ರ ವಿವಾದಕ್ಕೆ ಕಾರಣವಾಗಿದೆ. ಗುರುವಾರ ಮುಂಜಾನೆ ಜೆಸಿಬಿಗಳ ಮೂಲಕ ಹತ್ತಕ್ಕೂ ಹೆಚ್ಚು ಮನೆಗಳ ಕಂಪೌಂಡ್‌ಗಳನ್ನು ತೆರವುಗೊಳಿಸಿದ ಹಿನ್ನೆಲೆಯಲ್ಲಿ ಸ್ಥಳೀಯ ನಿವಾಸಿಗಳು ನಗರಸಭೆಯ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಸಫಾಯಿ ಕರ್ಮಚಾರಿಗಳಿಗೆ ಸರ್ಕಾರ ನೀಡಿರುವ ಮನೆಗಳಲ್ಲಿ ಹಲವು ವರ್ಷಗಳಿಂದ ವಾಸವಿರುವ ಬಡ ಕುಟುಂಬಗಳು ತಮ್ಮ ಖಆರ್‌ನಲ್ಲಿ ಕಂಪೌಂಡ್ ನಿರ್ಮಿಸಿಕೊಂಡಿದ್ದವು. ಯಾವುದೇ ಸಾರ್ವಜನಿಕರಿಗೆ ಅಥವಾ ವಾಹನ ಸಂಚಾರಕ್ಕೆ ತೊಂದರೆಯಾಗದಿದ್ದರೂ ಏಕಾಏಕಿ ತೆರವು ಕಾರ್ಯಾಚರಣೆ ನಡೆಸಲಾಗಿದೆ ಎಂದು ನಿವಾಸಿಗಳು ಆರೋಪಿಸಿದರು.

ಅವಳಿ ನಗರದ ಪ್ರಮುಖ ರಸ್ತೆಗಳಲ್ಲಿ ಫುಟ್‌ಪಾತ್ ಅತಿಕ್ರಮಿಸಿ ನಿರ್ಮಿಸಿರುವ ಬೃಹತ್ ವಾಣಿಜ್ಯ ಕಟ್ಟಡಗಳ ವಿರುದ್ಧ ನಗರಸಭೆ ಯಾವುದೇ ಕ್ರಮ ಕೈಗೊಂಡಿಲ್ಲ. ಆದರೆ ಬಡವರ ಮನೆಗಳ ಮೇಲೆ ಮಾತ್ರ ಬುಲ್ಡೋಜರ್ ಚಲಾಯಿಸಲಾಗಿದೆ ಎಂದು ಮಹಿಳೆಯರು ಮತ್ತು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದರು.

ನಗರಸಭೆ ಅಧಿಕಾರಿಗಳು ಪೊಲೀಸ್ ಬಂದೋಬಸ್ತ್‌ನೊಂದಿಗೆ ಆಗಮಿಸಿ ಕಂಪೌಂಡ್ ತೆರವು ಕಾರ್ಯಾಚರಣೆ ನಡೆಸಿದ ವೇಳೆ ಸ್ಥಳೀಯ ಮಹಿಳೆಯರು ತೀವ್ರ ವಿರೋಧ ವ್ಯಕ್ತಪಡಿಸಿದರು. ಆದರೂ ಕಾರ್ಯಾಚರಣೆ ಮುಂದುವರಿದಿದ್ದು, ಹಲವು ಮನೆಗಳ ಕಂಪೌಂಡ್‌ಗಳು ನೆಲಸಮಗೊಂಡವು. ಈ ಕುರಿತು ಪ್ರತಿಕ್ರಿಯಿಸಿದ ನಗರಸಭೆಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಲಕ್ಷ್ಮಣ ಜೋಗದಂಡಕರ, ಲೋಕಾಯುಕ್ತಕ್ಕೆ ಸಲ್ಲಿಕೆಯಾಗಿದ್ದ ದೂರಿನ ಹಿನ್ನೆಲೆಯಲ್ಲಿ ನಿಯಮಾನುಸಾರ ಅತಿಕ್ರಮಣ ತೆರವು ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದೆ ಎಂದು ಸ್ಪಷ್ಟಪಡಿಸಿದರು.

ಸ್ಥಳೀಯರು, ಬಡವರ ವಿರುದ್ಧ ಮಾತ್ರ ಕ್ರಮ ಕೈಗೊಳ್ಳದೆ, ಅವಳಿ ನಗರದಲ್ಲಿ ಫುಟ್‌ಪಾತ್ ಹಾಗೂ ರಸ್ತೆ ಅತಿಕ್ರಮಿಸಿ ನಿರ್ಮಿಸಿರುವ ಪ್ರಭಾವಿಗಳ ಕಟ್ಟಡಗಳ ವಿರುದ್ಧವೂ ನಗರಸಭೆ ಇದೇ ರೀತಿಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.


## ಬ್ರಾಹ್ಮಣ ಸಮುದಾಯಕ್ಕೆ ಸ್ವಉದ್ಯಮ ಸಾಲ ಯೋಜನೆಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವತಿಯಿಂದ 2026-27ನೇ ಸಾಲಿನ 'ವಿಪ್ರ ಸ್ವಉದ್ಯಮ ನೇರ ಸಾಲ ಯೋಜನೆ' ಅಡಿಯಲ್ಲಿ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಸಾಲ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಗುಡಿಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ (ಕ್ಯಾಟರಿಂಗ್), ಅಂಗಡಿ, ಟೈಲರಿಂಗ್, ಟ್ಯಾಕ್ಸಿ ಹಾಗೂ ಹಸು ಸಾಕಾಣಿಕೆ ಸೇರಿದಂತೆ ವಿವಿಧ ಸ್ವಉದ್ಯೋಗ ಚಟುವಟಿಕೆಗಳಿಗೆ ಕನಿಷ್ಠ ₹1 ಲಕ್ಷದಿಂದ ಗರಿಷ್ಠ ₹2 ಲಕ್ಷದವರೆಗೆ ಸಾಲ ನೀಡಲಾಗುತ್ತದೆ. ಸಾಲದ ಮೊತ್ತದಲ್ಲಿ ಶೇ.20ರಷ್ಟು ಸಬ್ಸಿಡಿ ದೊರೆಯಲಿದ್ದು, ಉಳಿದ ಶೇ.80ರಷ್ಟು ಮೊತ್ತವನ್ನು ಶೇ.4ರ ಬಡ್ಡಿದರದಲ್ಲಿ 34 ಕಂತುಗಳಲ್ಲಿ ಮರುಪಾವತಿಸಬೇಕು. ಅರ್ಹ ಅಭ್ಯರ್ಥಿಗಳು ಆಗಸ್ಟ್ 31, 2026ರೊಳಗೆ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿದಾರರು ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು. ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗಕ್ಕೆ ಸೇರಿದವರಾಗಿದ್ದು, ಚಾಲ್ತಿಯಲ್ಲಿರುವ ಆರ್ಥಿಕವಾಗಿ ಹಿಂದುಳಿದ ಪ್ರಮಾಣಪತ್ರ ಹೊಂದಿರಬೇಕು. ಹೆಚ್ಚಿನ ಮಾಹಿತಿಗಾಗಿ 08372-295583 ಸಹಾಯವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ (ಪ್ರಭಾರ) ಎನ್.ಎಸ್. ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೂರು ದಶಕಗಳಿಗೂ ಅಧಿಕ ಕಾಲ ಪತ್ರಿಕೋದ್ಯಮ ಮತ್ತು
ಟಿ.ವಿ. ಮಾಧ್ಯಮ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿರುವ ಹಿರಿಯ ಪತ್ರಕರ್ತರು.
ಸತ್ಯ, ನಿಷ್ಠೆ ಮತ್ತು ಸಾಮಾಜಿಕ ಬದ್ಧತೆಯ ಮೂಲಕ ಸಾವಿರಾರು
ಜನರ ಮನಸ್ಸಿನಲ್ಲಿ ಅಚ್ಚಳಿಯದ ಸ್ಥಾನ ಪಡೆದಿರುವ ಅಪರೂಪದ
ವ್ಯಕ್ತಿತ್ವ ಹಿರಿಯ ಪತ್ರಕರ್ತರು ಹಾಗೂ ನಮ್ಮೆಲ್ಲರ ಮಾರ್ಗದರ್ಶಕರಾದ



ಅನಂತ ಎಸ್. ಕಾರ್ಕಳ
ಇವರಿಗೆ
60 ನೇ ವರ್ಷದ ಜನ್ಮ ದಿನದ
ಹಾರ್ದಿಕ ಶುಭಾಶಯಗಳು

-: ಶುಭ ಕೋರುವವರು :-
ಗದಗ ಮೀಡಿಯಾ ಕ್ರಿಕೆಟ್ ಲೀಗ್-2026
ನೈಟ್ ರೈಡರ್ಸ್ ತಂಡ
ಎಚ್.ಎಮ್. ಶರೀಫನವರ್, ಆನಂದಯ್ಯ ವಿರಕ್ತಮಠ,
ಆನಂದ ಸಾಲಿಗ್ರಾಮ, ಸುರೇಶ್ ಕಡ್ಲಿಮಟ್ಟಿ, ಮಂಜುನಾಥ ಶಿರಸಂಗಿ,
ಗೌಸ್ ಬೆಟಗೇರಿ, ಮಂಜುನಾಥ ಪತ್ತಾರ, ಅರುಣ ಹಿರೇಮಠ,
ಸುವೇಂದ್ರ ಕುಲಕರ್ಣಿ, ಮಹಾಂತೇಶ್ ಹೂಗಾರ,
ಫಾರೂಕ್ ಮಕಾನದಾರ, ಗಣೇಶ ದೊಡ್ಡಮನಿ, ಪ್ರಭುಸ್ವಾಮಿ ಅರವಟಗಿಮಠ,
ಪ್ರದೀಪ ಗೊಡಚಪ್ಪನವರ್, ಉಮೇಶ್ ಬಸನಗೌಡ್ರ,
ವೀರಯ್ಯ ಹಿರೇಮಠ, ಮಂಜುನಾಥ ಅರಪಲ್ಲಿ, ಸಂಗನಗೌಡ ಖಾನಪ್ಪಗೌಡ್ರ,

# ಮಾಧ್ಯಮ ಕ್ರಿಕೆಟ್ ಲೀಗ್‌ಗೆ ರೂರಲ್ ಕಿಂಗ್ಸ್ ಸಜ್ಜು



> ಮಾಧ್ಯಮ ಕ್ರಿಕೆಟ್ ಲೀಗ್‌ನಂತಹ ಕಾರ್ಯಕ್ರಮಗಳಿಂದ ಜಿಲ್ಲೆಯ ಪತ್ರಕರ್ತರೆಲ್ಲರೂ ಒಂದೇ ವೇದಿಕೆಯಲ್ಲಿ ಸೇರುವ ಅವಕಾಶ ದೊರೆಯುತ್ತದೆ. ನಿತ್ಯದ ಒತ್ತಡದ ನಡುವೆ ಇಂತಹ ವಿನೂತನ ಕಾರ್ಯಕ್ರಮಗಳು ಅಗತ್ಯ. ಮುಂದೆಯೂ ಇಂತಹ ಕಾರ್ಯಕ್ರಮಗಳಿಗೆ ನಮ್ಮ ಸಂಪೂರ್ಣ ಸಹಕಾರ ಇರುತ್ತದೆ.
> – **ಜಗದೀಶ್ ಎಸ್.ಪಿ.,** ಸಂಪಾದಕರು, ರತ್ನಾಕರವಾಣಿ ಕನ್ನಡ ದಿನಪತ್ರಿಕೆ ಹಾಗೂ ರೂರಲ್ ಕಿಂಗ್ಸ್ ತಂಡದ ಮಾಲೀಕರು

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕವು ಪತ್ರಿಕಾ ದಿನಾಚರಣೆ ಅಂಗವಾಗಿ ಆಯೋಜಿಸಿರುವ ಮಾಧ್ಯಮ ಕ್ರಿಕೆಟ್ ಲೀಗ್ ಹಿನ್ನೆಲೆಯಲ್ಲಿ ರೂರಲ್ ಕಿಂಗ್ಸ್ ತಂಡದ ಲೋಗೋ, ಪ್ರೋಮೋ ಹಾಗೂ ಜರ್ಸಿಯನ್ನು ಗುರುವಾರ ನಗರದ ಪತ್ರಿಕಾ ಭವನದಲ್ಲಿ ಅನಾವರಣಗೊಳಿಸಲಾಯಿತು.

ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಸಂಪಾದಕರ ಸಂಘದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ, ಪತ್ರಕರ್ತರು ನಿರಂತರ ಒತ್ತಡದ ನಡುವೆ ಕಾರ್ಯನಿರ್ವಹಿಸುತ್ತಿದ್ದು, ಇಂತಹ ಕ್ರೀಡಾಕೂಟಗಳು ಮಾನಸಿಕ ನೆಮ್ಮದಿ ನೀಡುವ ಜತೆಗೆ ಪರಸ್ಪರ ಬಾಂಧವ್ಯವನ್ನು ಬೆಳೆಸುವ ವೇದಿಕೆಯಾಗುತ್ತವೆ ಎಂದು ಹೇಳಿದರು.

ಹಿರಿಯ ಪತ್ರಕರ್ತ ಹಾಗೂ ವಿನ್ನರ್ಸ್ ತಂಡದ ಮಾಲೀಕ ಅನಂತ ಕಾರ್ಕಳ ಮಾತನಾಡಿ, ಕ್ರೀಡೆಗಳು ಮಾನಸಿಕ ಒತ್ತಡ ನಿವಾರಿಸುವ ಜೊತೆಗೆ ಆರೋಗ್ಯ ಕಾಪಾಡಲು ಸಹಕಾರಿಯಾಗುತ್ತವೆ. ಜಿಲ್ಲೆಯ ವಿವಿಧ ಭಾಗಗಳ ಪತ್ರಕರ್ತರು ಒಂದೇ ವೇದಿಕೆಯಲ್ಲಿ ಸೇರುವುದರಿಂದ ಆತ್ಮೀಯತೆ ಮತ್ತು ಸ್ನೇಹ ಮತ್ತಷ್ಟು ಗಟ್ಟಿಯಾಗಲಿದೆ ಎಂದು ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಮಾತನಾಡಿ, ಪತ್ರಿಕಾ ದಿನಾಚರಣೆ ಅಂಗವಾಗಿ ಈ ವರ್ಷ ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಹಲವು ಸಮಾಜಮುಖಿ ಹಾಗೂ ಕ್ರೀಡಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಗದಗದಲ್ಲಿ ಮೊದಲ ಬಾರಿಗೆ ಜಿಲ್ಲಾ ಮಟ್ಟದ ಮಾಧ್ಯಮ ಕ್ರಿಕೆಟ್ ಲೀಗ್ ಆಯೋಜಿಸಿರುವುದು ವಿಶೇಷವಾಗಿದ್ದು, ಎಲ್ಲಾ ತಂಡಗಳ ಆಟಗಾರರು ಕ್ರೀಡಾಸ್ಫೂರ್ತಿಯಿಂದ ಪಾಲ್ಗೊಂಡು ಮಾದರಿಯಾಗಬೇಕು ಎಂದರು. ನೈಟ್ ರೈಡರ್ಸ್ ತಂಡದ ಮಾಲಿಕ ಆನಂದಯ್ಯ ವಿರಕ್ತಮಠ ಕಾರ್ಯಕ್ರಮ ನಿರೂಪಿಸಿದರು. ಈ ಸಂದರ್ಭದಲ್ಲಿ ಎಚ್.ಎಂ. ಶರೀಫನವರ, ದೇವಪ್ಪ ಲಿಂಗದಾಳ, ಸುನೀಲ ತೆಂಬದಮನಿ, ರವಿಕಾಂತ ಅಂಗಡಿ, ಟಿ.ಎನ್. ಭಾಂಡಗೆ, ಶರಣು ದೊಡ್ಡೂರ, ಅರುಣಕುಮಾರ ಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಶರಣರ ಸಮಾನತೆ, ಮಾನವೀಯತೆ ಮತ್ತು ಬಸವ ತತ್ವಗಳನ್ನು ಪಾಲಿಸಿ: ಶಾಕೀರ್ ಸನದಿ

# ಹಡಪದ ಅಪ್ಪಣ್ಣರ ಆದರ್ಶಗಳು ಇಂದಿಗೂ ಪ್ರಸ್ತುತ




**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಶಿವಶರಣ ಹಡಪದ ಅಪ್ಪಣ್ಣ ಅವರು ಮಾನವ ಸೇವೆ, ಸಮಾನತೆ ಮತ್ತು ಸೌಹಾರ್ದತೆಯ ಬದುಕನ್ನು ಪ್ರತಿಪಾದಿಸಿದ ಮಹಾನ್ ಶಿವಶರಣರಾಗಿದ್ದು, ಅವರ ತತ್ವಗಳು ಇಂದಿಗೂ ಸಮಾಜಕ್ಕೆ ಮಾರ್ಗದರ್ಶಿಯಾಗಿವೆ ಎಂದು ಹುಬ್ಬಳ್ಳಿಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ ಹೇಳಿದರು.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಬುಧವಾರ ಆಯೋಜಿಸಿದ್ದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಸವಣ್ಣನವರ ಸಾಮಾಜಿಕ ಕ್ರಾಂತಿಗೆ ಹಡಪದ ಅಪ್ಪಣ್ಣ ಅವರು ಅಪಾರ ಕೊಡುಗೆ ನೀಡಿದ್ದು, ಶರಣರ ವಚನಗಳ ಮೂಲಕ ಸಮಾನತೆ, ಮಾನವೀಯತೆ ಮತ್ತು ಸತ್ಯದ ಬದುಕಿನ ಸಂದೇಶವನ್ನು ಜನರಲ್ಲಿ ಬಿತ್ತಿದರು. ವಿದ್ಯಾರ್ಥಿಗಳಲ್ಲಿ ಬಸವ ತತ್ವಗಳು, ಶರಣರ ವಚನಗಳು ಮತ್ತು ದೇಶದ ಇತಿಹಾಸದ ಕುರಿತು ಅರಿವು ಮೂಡಿಸಿದರೆ ಅವರ ವ್ಯಕ್ತಿತ್ವ ವಿಕಸನದ ಜೊತೆಗೆ ಉತ್ತಮ ಸಮಾಜ ನಿರ್ಮಾಣಕ್ಕೂ ಸಹಕಾರಿಯಾಗಲಿದೆ ಎಂದು ಹೇಳಿದರು.

ಹುಬ್ಬಳ್ಳಿಧಾರವಾಡ ಮಹಾನಗರ ಪಾಲಿಕೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪ್ರಕಾಶ ಹಳಿಯಾಳ ಮಾತನಾಡಿ, ಹಡಪದ ಅಪ್ಪಣ್ಣ ಅವರು ಶ್ರದ್ಧೆ, ಭಕ್ತಿ ಹಾಗೂ ಪ್ರಾಮಾಣಿಕ ಕಾಯಕದ ಮೂಲಕ ಮಾದರಿಯಾಗಿದ್ದು, ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರೇಮಲ್ಲೂರು ಈಶ್ವರನ್ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಡಾ. ಈರಣ್ಣ ಇಂಜಗನೇರಿ ಅವರು ಶಿವಶರಣ ಹಡಪದ ಅಪ್ಪಣ್ಣ ಅವರ ಕುರಿತು ವಿಶೇಷ ಉಪನ್ಯಾಸ ನೀಡಿದರು.

ವೇದಿಕೆಯಲ್ಲಿ ಅಖಿಲ ಕರ್ನಾಟಕ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ಜಿಲ್ಲಾ ಪ್ರತಿನಿಧಿ ಫಕೀರೇಶ ಅಡಿವೆಪ್ಪ ಹಡಪದ, ಜಿಲ್ಲಾ ಹಡಪದ ನೌಕರರ ಸಂಘದ ಪ್ರಮುಖರಾದ ಮಹಾರುದ್ರಪ್ಪ ಪಡೆಸೂರ, ನಿಂಗರಾಜ ಹಡಪದ, ಶಂಕರ ಹಡಪದ, ಮಂಜುಳಾ ಪಡೆಸೂರ, ಕಿರಣ ಹಡಪದ, ಮಾರುತಿ ಹಡಪದ, ಶಿವಕುಮಾರ ಅಣ್ಣಿಗೇರಿ, ನಾಗರಾಜ ಅಂಗಡಿ, ಈರಣ್ಣ ಹಡಪದ, ಸಂಗಮೇಶ ಬೂದಿಹಾಳ, ಫಕೀರಪ್ಪ ಮೂಲಿಮನಿ, ಮಲ್ಲಪ್ಪ ಹಡಪದ ಹಾಗೂ ಶಾಂತವ್ವ ಹಡಪದ ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ರವಿ ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಶೇ.95ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಸಮಾಜದ ಮುಖಂಡರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

**ಶರಣರ ವಚನಗಳು ಮಾನವೀಯತೆ, ಸಹಬಾಳ್ವೆ ಮತ್ತು ಸತ್ಯದ ಬದುಕಿಗೆ ದಾರಿದೀಪ. ಯುವಜನತೆ ಮಹನೀಯರ ಆದರ್ಶಗಳನ್ನು ಅಳವಡಿಸಿಕೊಂಡಾಗ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ಸಾಧ್ಯ.**

**– ಶಾಕೀರ್ ಸನದಿ,**
ಅಧ್ಯಕ್ಷರು, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ

---

### ಜೋಳಿಗೆಯಲ್ಲಿತ್ತು ಸಮಾಜ ಪರಿವರ್ತನೆಯ ಸಂಕಲ್ಪ | ವ್ಯಸನ ಮುಕ್ತ ಭಾರತದ ಕನಸು ಕಂಡ ಲಿಂಗೈಕ್ಯ ಡಾ. ಮಹಾಂತ ಶಿವಯೋಗಿ ಅಜ್ಜನವರು

# ಜೋಳಿಗೆ ಹಿಡಿದು ವ್ಯಸನ ಭಿಕ್ಷೆ ಬೇಡಿದ ಮಹಾನ್ ಸಂತ!


ಸಮಾಜವನ್ನು ಬದಲಾಯಿಸಲು ಕಾನೂನು, ಶಿಕ್ಷೆ ಅಥವಾ ಭಯಕ್ಕಿಂತಲೂ ಮನಪರಿವರ್ತನೆಯೇ ಅತ್ಯಂತ ದೊಡ್ಡ ಅಸ್ತ್ರ ಎಂಬುದನ್ನು ತಮ್ಮ ಬದುಕಿನ ಮೂಲಕ ಸಾಬೀತುಪಡಿಸಿದ ಮಹಾನ್ ಸಮಾಜ ಸುಧಾರಕರಲ್ಲಿ ಲಿಂಗೈಕ್ಯ ಡಾ. ಮಹಾಂತ ಶಿವಯೋಗಿ ಅಜ್ಜನವರು ಅಗ್ರಗಣ್ಯರು.

ಕೈಯಲ್ಲಿ ಕೆಂಪು ಬಣ್ಣದ ಜೋಳಿಗೆ, ಹೃದಯದಲ್ಲಿ ಸಮಾಜದ ನೋವು, ತುಟಿಗಳಲ್ಲಿ ಜಾಗೃತಿಯ ಸಂದೇಶ ಹೊತ್ತು ದೇಶ-ವಿದೇಶಗಳಲ್ಲಿ ಸಂಚರಿಸಿದ ಅವರು, ಲಕ್ಷಾಂತರ ಜನರ ಬದುಕಿನಲ್ಲಿ ಹೊಸ ಬೆಳಕು ಮೂಡಿಸಿದರು. ಜನರಿಂದ ಹಣವಲ್ಲ, ಮದ್ಯ, ತಂಬಾಕು, ಗುಟ್ಕಾ, ಬೀಡಿ, ಸಿಗರೇಟ್ ಸೇರಿದಂತೆ ತಮ್ಮ ದುಶ್ಚಟಗಳನ್ನೇ ಜೋಳಿಗೆಗೆ ಹಾಕುವಂತೆ ಭಿಕ್ಷೆ ಬೇಡಿದ ಅವರ ಅಪರೂಪದ ಅಭಿಯಾನ ವಿಶ್ವದಲ್ಲೇ ವಿಶಿಷ್ಟ ಸಾಮಾಜಿಕ ಜಾಗೃತಿ ಚಳವಳಿಯಾಗಿ ಗುರುತಿಸಿಕೊಂಡಿದೆ.

ಅವರ ಈ ಅಪೂರ್ವ ಸೇವೆಯನ್ನು ಗೌರವಿಸಿ ಕರ್ನಾಟಕ ಸರ್ಕಾರವು ಪ್ರತಿವರ್ಷ ಆಗಸ್ಟ್ 1ರಂದು 'ವ್ಯಸನ ಮುಕ್ತ ದಿನಾಚರಣೆ'ಯನ್ನು ರಾಜ್ಯಾದ್ಯಂತ ಆಚರಿಸುತ್ತಿದೆ. ಯುವಜನತೆಯಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಈ ದಿನಕ್ಕೆ ವಿಶೇಷ ಮಹತ್ವ ನೀಡಲಾಗಿದೆ.

**ಬಾಲ್ಯದಲ್ಲೇ ಸನ್ಯಾಸ, ಸಮಾಜ ಸೇವೆಯತ್ತ ಪಯಣ** 1930ರ ಆಗಸ್ಟ್ 1ರಂದು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ ಜನಿಸಿದ ಡಾ. ಮಹಾಂತ ಶಿವಯೋಗಿಗಳು ಬಾಲ್ಯದಲ್ಲಿಯೇ ಆಧ್ಯಾತ್ಮಿಕ ಬದುಕಿನತ್ತ ಆಕರ್ಷಿತರಾದರು. ಕೇವಲ 10ನೇ ವಯಸ್ಸಿನಲ್ಲೇ ಸನ್ಯಾಸ ಸ್ವೀಕರಿಸಿ ಸವದಿಯ ವಿರಕ್ತ ಮಠದ ಚಿಕ್ಕ ಸ್ವಾಮೀಜಿಗಳಾದರು.

ಕಾಶಿಯಲ್ಲಿ ಸಂಸ್ಕೃತ, ಹಿಂದಿ, ಯೋಗ, ಶಾಸ್ತ್ರೀಯ ಸಂಗೀತ ಹಾಗೂ ಆಧ್ಯಾತ್ಮಿಕ ವಿದ್ಯೆಗಳಲ್ಲಿ ಉನ್ನತ ಶಿಕ್ಷಣ ಪಡೆದ ಅವರು, ತಮ್ಮ ಜ್ಞಾನವನ್ನು ಸಮಾಜದ ಒಳಿತಿಗಾಗಿ ಬಳಸುವ ಸಂಕಲ್ಪ ಕೈಗೊಂಡರು. 1970ರಲ್ಲಿ



ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ 19ನೇ ಪೀಠಾಧಿಪತಿಗಳಾಗಿ ಅಧಿಕಾರ ವಹಿಸಿಕೊಂಡ ನಂತರ ಸಮಾಜಮುಖಿ ಕಾರ್ಯಗಳಿಗೆ ಹೊಸ ದಿಕ್ಕು ನೀಡಿದರು.

**ಒಂದು ಕುಟುಂಬದ ದುರಂತದಿಂದ ಹುಟ್ಟಿದ ಮಹಾನ್ ಚಳವಳಿ** ಅತಿಯಾದ ಮದ್ಯಪಾನದಿಂದ ಮೃತಪಟ್ಟ ಯುವಕನ ಮನೆಗೆ ಸಾಂತ್ವನ ಹೇಳಲು ತೆರಳಿದಾಗ ಕಂಡ ದೃಶ್ಯ, ಶ್ರೀಗಳ ಬದುಕಿನ ದಿಕ್ಕನ್ನೇ ಬದಲಿಸಿತು. ಗಂಡನನ್ನು ಕಳೆದುಕೊಂಡ ಪತ್ನಿ, ಹಸಿವಿನಿಂದ ಕಣ್ಣೀರು ಸುರಿಸುತ್ತಿದ್ದ ಮಕ್ಕಳು, ದಿಕ್ಕಿಲ್ಲದೆ ನಿಂತ ಕುಟುಂಬವನ್ನು ಕಂಡ ಅವರು, ಇದು ಕೇವಲ ಒಂದು ಕುಟುಂಬದ ದುಃಖವಲ್ಲ, ಸಾವಿರಾರು ಮನೆಗಳ ವಾಸ್ತವ ಎಂದು ಅರಿತುಕೊಂಡರು.

ಈ ಅನುಭವವೇ 1975ರಲ್ಲಿ 'ಮಹಾಂತ ಜೋಳಿಗೆ' ಅಭಿಯಾನಕ್ಕೆ ಕಾರಣವಾಯಿತು.

**ಹಣವಲ್ಲ, ದುಷ್ಚಟಗಳನ್ನೇ ಜೋಳಿಗೆಗೆ ಹಾಕಿ!**

ಕೈಯಲ್ಲಿ ಕೆಂಪು ಜೋಳಿಗೆ ಹಿಡಿದು ಮನೆ-ಮನೆಗೆ ತೆರಳುತ್ತಿದ್ದ ಶ್ರೀಗಳು, ಮದ್ಯ, ತಂಬಾಕು, ಗುಟ್ಕಾ, ಬೀಡಿ, ಸಿಗರೇಟ್ ಹಾಗೂ ಎಲ್ಲ ರೀತಿಯ ದುಷ್ಚಟಗಳನ್ನು ಈ ಜೋಳಿಗೆಗೆ ಹಾಕಿ... ಇನ್ನು ಮುಂದೆ ಅವುಗಳಿಂದ ದೂರವಿರಿ ಎಂದು ಮನವಿ ಮಾಡುತ್ತಿದ್ದರು.

ಅವರ ಮಾತಿನಲ್ಲಿ ಭಯ ಇರಲಿಲ್ಲ; ಪ್ರೀತಿ, ಕಾಳಜಿ ಹಾಗೂ ಬದುಕಿನ ಮೌಲ್ಯಗಳಿದ್ದವು. ಪರಿಣಾಮ ಸಾವಿರಾರು ಜನರು ವ್ಯಸನ ತೊರೆದು ಹೊಸ ಬದುಕು ಆರಂಭಿಸಿದರು.

ಸುಮಾರು 42 ವರ್ಷಗಳ ಕಾಲ ದೇಶದ ಮೂಲೆಮೂಲೆಗೂ ಹಾಗೂ ಇಂಗ್ಲೆಂಡ್ ಸೇರಿದಂತೆ ವಿದೇಶಗಳಿಗೂ ತೆರಳಿ ವ್ಯಸನ ಮುಕ್ತ ಸಮಾಜಕ್ಕಾಗಿ ಅವರು ನಿರಂತರ ಜನಜಾಗೃತಿ ಮೂಡಿಸಿದರು.

**ವ್ಯಸನ ನಿರ್ಮೂಲನೆ ಮಾತ್ರವಲ್ಲ... ಸಮಾಜ ಸುಧಾರಣೆಯ ಮಹಾಯಜ್ಞ**

ಡಾ. ಮಹಾಂತ ಶಿವಯೋಗಿ ಅಜ್ಜನವರ ಸೇವೆ ವ್ಯಸನ ನಿರ್ಮೂಲನೆಗೆ ಮಾತ್ರ ಸೀಮಿತವಾಗಿರಲಿಲ್ಲ.

ಅವರು ನಿರಂತರ ಅನ್ನದಾಸೋಹ, ವಚನ ಮಾಂಗಲ್ಯ, ದೇವದಾಸಿ ವಿಮೋಚನಾ ಚಳವಳಿ, ದೇವದಾಸಿಯರ ಮಕ್ಕಳಿಗಾಗಿ ಟ್ರಸ್ಟ್ ಸ್ಥಾಪನೆ, ನಿರುದ್ಯೋಗಿಗಳು ಹಾಗೂ ವಿಧವೆಯರಿಗಾಗಿ 'ಕಾಯಕ ಸಂಜೀವಿನಿ' ಸಂಸ್ಥೆ, ಯೋಗ ಮತ್ತು ನಿಸರ್ಗ ಚಿಕಿತ್ಸಾ ಕೇಂದ್ರಗಳು, ಪರಿಶಿಷ್ಟ ಜಾತಿ ಹಾಗೂ ಪಂಗಡದ ಯುವಕರಿಗೆ ಧರ್ಮ ಸಂಸ್ಕಾರ, ಮಹಿಳಾ ಸಾಧಕಿಯರಿಗೆ ಜಂಗಮ ದೀಕ್ಷೆ ನೀಡಿ ಮಠಾಧಿಪತಿಗಳನ್ನಾಗಿ ಮಾಡುವುದು, ಮಠದ ಜಮೀನಿನಲ್ಲಿ ರೈತರಿಗೆ ಕೃಷಿಗೆ ಅವಕಾಶ ಕಲ್ಪಿಸುವುದು ಹಾಗೂ ಬರಗಾಲದ ಸಂದರ್ಭದಲ್ಲಿ ಗಂಜಿ ಕೇಂದ್ರಗಳನ್ನು ಆರಂಭಿಸುವ ಮೂಲಕ ಸಮಾಜದ ಎಲ್ಲ ವರ್ಗಗಳ ಅಭಿವೃದ್ಧಿಗೆ ಶ್ರಮಿಸಿದರು.

**ಸಮಾಜ ಸೇವೆಗೆ ಸಂದ ಅನೇಕ ಗೌರವಗಳು**

ಅವರ ಅಪೂರ್ವ ಸೇವೆಗಾಗಿ 'ಅಭಿನವ ಚನ್ನಬಸವಣ್ಣ', 'ಕಾಯಕನಿಷ್ಠ ಶಿವಯೋಗಿ', 'ಪ್ರವಚನ ಪ್ರವೀಣ', 'ಕಾಯಕಯೋಗಿ', 'ಸಮಾಜ ಸುಧಾರಕ', 'ದಲಿತೋದ್ಧಾರ ಮಹಾಂತ', 'ಸ್ಪಂದನ ಪ್ರಶಸ್ತಿ', 'ಗಣಾಚಾರ ಪ್ರಶಸ್ತಿ', 'ಕನಕಶ್ರೀ ಪ್ರಶಸ್ತಿ', 'ನಾಡಿನ ಪುಣ್ಯದ ಶಿವಯೋಗಿ ಪ್ರಶಸ್ತಿ', 'ಯೋಗರತ್ನ ಪ್ರಶಸ್ತಿ' ಸೇರಿದಂತೆ ಹಲವಾರು ಪ್ರತಿಷ್ಠಿತ ಗೌರವಗಳು ಅವರಿಗೆ ಲಭಿಸಿವೆ.

**ಸಂದೇಶ ಇಂದಿಗೂ ಜೀವಂತ**

2018ರಲ್ಲಿ ಡಾ. ಮಹಾಂತ ಶಿವಯೋಗಿ ಅಜ್ಜನವರು ಶಿವೈಕ್ಯರಾದರೂ, ಅವರು ಬಿತ್ತಿದ ವ್ಯಸನ ಮುಕ್ತ ಸಮಾಜದ ಕನಸು ಇಂದಿಗೂ ಲಕ್ಷಾಂತರ ಜನರಿಗೆ ಪ್ರೇರಣೆಯಾಗಿದೆ. ಇಂದಿನ ದಿನಗಳಲ್ಲಿ ಯುವಜನತೆ ಮಾದಕ ವಸ್ತುಗಳತ್ತ ಆಕರ್ಷಿತರಾಗುತ್ತಿರುವ ಸಂದರ್ಭದಲ್ಲಿ, ಅವರ 'ಮಹಾಂತ ಜೋಳಿಗೆ' ಚಳವಳಿ ಇನ್ನಷ್ಟು ಪ್ರಸ್ತುತವಾಗಿದೆ. ಆರೋಗ್ಯವಂತ ವ್ಯಕ್ತಿ, ಸುಖೀ ಕುಟುಂಬ ಹಾಗೂ ಸದೃಢ ಸಮಾಜ ನಿರ್ಮಾಣಕ್ಕೆ ಅವರ ಆದರ್ಶಗಳು ಇಂದಿಗೂ ದಾರಿದೀಪವಾಗಿವೆ.

**– ವಸಂತ ಬಿ. ಮಡ್ಲೂರ,**
ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಗದಗ.

**ಲಿಂಗೈಕ್ಯ ಡಾ. ಮಹಾಂತ ಶಿವಯೋಗಿ ಅಜ್ಜನವರು ಆರಂಭಿಸಿದ 'ಮಹಾಂತ ಜೋಳಿಗೆ' ಅಭಿಯಾನವು ಕೇವಲ ವ್ಯಸನ ವಿರೋಧಿ ಚಳವಳಿಯಲ್ಲ; ಅದು ಸಮಾಜದ ಮನಪರಿವರ್ತನೆಯ ಮಹತ್ವದ ಆಂದೋಲನವಾಗಿದೆ. ಪ್ರತಿಯೊಬ್ಬ ಯುವಕ-ಯುವತಿಯೂ ಮಾದಕ ವಸ್ತುಗಳು ಹಾಗೂ ದುಷ್ಚಟಗಳಿಂದ ದೂರವಿದ್ದು ಆರೋಗ್ಯಯುತ ಜೀವನ ನಡೆಸಬೇಕು. ಆಗಸ್ಟ್ 1ರ ವ್ಯಸನ ಮುಕ್ತ ದಿನಾಚರಣೆಯ ಅಂಗವಾಗಿ ಪ್ರತಿಯೊಬ್ಬರೂ ತಮ್ಮ ಕುಟುಂಬ, ಸ್ನೇಹಿತರು ಹಾಗೂ ಸಮಾಜದಲ್ಲಿ ವ್ಯಸನ ವಿರೋಧಿ ಜಾಗೃತಿ ಮೂಡಿಸುವ ಸಂಕಲ್ಪ ಮಾಡಬೇಕು. ವ್ಯಸನ ಮುಕ್ತ ವ್ಯಕ್ತಿ, ವ್ಯಸನ ಮುಕ್ತ ಕುಟುಂಬ ಮತ್ತು ವ್ಯಸನ ಮುಕ್ತ ಗ್ರಾಮಗಳ ನಿರ್ಮಾಣವೇ ಡಾ. ಮಹಾಂತ ಶಿವಯೋಗಿ ಅಜ್ಜನವರಿಗೆ ಸಲ್ಲಿಸುವ ನಿಜವಾದ ಗೌರವವಾಗಿದೆ.**

**– ಸಿ.ಎನ್. ಶ್ರೀಧರ,** ಜಿಲ್ಲಾಧಿಕಾರಿ, ಗದಗ

## ಪ್ರಮುಖಾಂಶಗಳು

- 1930ರ ಆಗಸ್ಟ್ 1ರಂದು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ ಜನನ.
- ಕೇವಲ 10ನೇ ವಯಸ್ಸಿನಲ್ಲೇ ಸನ್ಯಾಸ ಸ್ವೀಕರಿಸಿ ಸವದಿಯ ವಿರಕ್ತ ಮಠದ ಚಿಕ್ಕ ಸ್ವಾಮೀಜಿಗಳಾದರು.
- ಕಾಶಿಯಲ್ಲಿ ಸಂಸ್ಕೃತ, ಹಿಂದಿ, ಯೋಗ, ಶಾಸ್ತ್ರೀಯ ಸಂಗೀತ ಹಾಗೂ ಆಧ್ಯಾತ್ಮಿಕ ವಿದ್ಯೆಗಳಲ್ಲಿ ಪರಿಣತಿ ಪಡೆದರು.
- 1970ರಲ್ಲಿ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ 19ನೇ ಪೀಠಾಧಿಪತಿಗಳಾಗಿ ಅಧಿಕಾರ ವಹಿಸಿಕೊಂಡರು.
- 1975ರಲ್ಲಿ ಐತಿಹಾಸಿಕ 'ಮಹಾಂತ ಜೋಳಿಗೆ' ವ್ಯಸನ ವಿರೋಧಿ ಅಭಿಯಾನ ಆರಂಭಿಸಿದರು.
- 42 ವರ್ಷಗಳ ಕಾಲ ದೇಶ-ವಿದೇಶಗಳಲ್ಲಿ ಸಂಚರಿಸಿ ವ್ಯಸನ ಮುಕ್ತ ಸಮಾಜಕ್ಕಾಗಿ ಜನಜಾಗೃತಿ ಮೂಡಿಸಿದರು.
- ಅನ್ನದಾಸೋಹ, ದೇವದಾಸಿ ವಿಮೋಚನೆ, ಯೋಗ-ನಿಸರ್ಗ ಚಿಕಿತ್ಸೆ, ಮಹಿಳಾ ಸಬಲೀಕರಣ, ರೈತರಿಗೆ ನೆರವು ಸೇರಿದಂತೆ ಅನೇಕ ಸಮಾಜಮುಖಿ ಕಾರ್ಯಕ್ರಮಗಳನ್ನು ಜಾರಿಗೊಳಿಸಿದರು.
- ಸಮಾಜ ಸೇವೆಗಾಗಿ 'ಅಭಿನವ ಚನ್ನಬಸವಣ್ಣ', 'ಸಮಾಜ ಸುಧಾರಕ', 'ಕಾಯಕಯೋಗಿ', 'ಯೋಗರತ್ನ' ಸೇರಿದಂತೆ ಹಲವು ಪ್ರತಿಷ್ಠಿತ ಪ್ರಶಸ್ತಿಗಳಿಗೆ ಭಾಜನರಾದರು.
- 2018ರಲ್ಲಿ ಶಿವೈಕ್ಯರಾದರೂ ಅವರ ವ್ಯಸನ ಮುಕ್ತ ಸಮಾಜದ ಸಂದೇಶ ಇಂದಿಗೂ ಲಕ್ಷಾಂತರ ಜನರಿಗೆ ಸ್ಫೂರ್ತಿಯಾಗಿದೆ.
- ಅವರ ಅಪೂರ್ವ ಸಮಾಜ ಸೇವೆಯನ್ನು ಗೌರವಿಸಿ ಕರ್ನಾಟಕ ಸರ್ಕಾರವು ಪ್ರತಿವರ್ಷ ಆಗಸ್ಟ್ 1 ಅನ್ನು ಟವ್ಯಸನ ಮುಕ್ತ ದಿನಾಚರಣೆಟಿಯಾಗಿ ಆಚರಿಸುತ್ತಿದೆ.

---

# ಪಿಎಸ್‌ಐ ಮಾರುತಿ ಜೋಗದಂಡಕರಗೆ ಸನ್ಮಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿಷ್ಠಿತ ರಾಷ್ಟ್ರಪತಿ ಪದಕ ಹಾಗೂ ಡಿಜಿಐಜಿಪಿ ಕಮೆಂಡೇಷನ್ ಡಿಸ್ಕ್ ಪ್ರಶಸ್ತಿಗೆ ಭಾಜನರಾಗಿರುವ ಬೆಟಗೇರಿ ಬಡಾವಣೆ ಪೊಲೀಸ್ ಠಾಣೆಯ ಪಿಎಸ್‌ಐ ಮಾರುತಿ ಜೋಗದಂಡಕರ್ ಅವರನ್ನು ಗದಗಿನ ಸಾಮಾಜಿಕ ಸಂಸ್ಥೆಯಾದ ಅಮ್ಮ ಫೌಂಡೇಶನ್ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಇತ್ತೀಚೆಗೆ ಬೆಂಗಳೂರಿನ ಕೋರಮಂಗಲದ 3ನೇ ಪಡೆ ಕೆಎಸ್‌ಆರ್‌ಪಿ ಮೈದಾನದಲ್ಲಿ ನಡೆದ ರಾಜ್ಯಮಟ್ಟದ ಗೌರವ ಪ್ರದಾನ ಹಾಗೂ ಪಥಸಂಚಲನ ಸಮಾರಂಭದಲ್ಲಿ ರಾಜ್ಯ ಪೊಲೀಸ್ ಮಹಾನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರಿಂದ (ಡಿಜಿಐಜಿಪಿ) ಅವರಿಗೆ ಪ್ರತಿಷ್ಠಿತ ಕಮೆಂಡೇಷನ್ ಡಿಸ್ಕ್ ಪ್ರಶಸ್ತಿ ಪ್ರದಾನ ಮಾಡಲಾಗಿತ್ತು. ಇದಕ್ಕೂ ಮುನ್ನ ರಾಷ್ಟ್ರಪತಿ ಪದಕಕ್ಕೂ ಭಾಜನರಾಗಿದ್ದ ಅವರು ಗದಗ ಜಿಲ್ಲೆ ಹಾಗೂ ಜಿಲ್ಲಾ ಪೊಲೀಸ್ ಇಲಾಖೆಗೆ ಹೆಮ್ಮೆ ತಂದಿರುವ ಹಿನ್ನೆಲೆಯಲ್ಲಿ ಈ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಗಿತ್ತು.



ಸನ್ಮಾನ ಕಾರ್ಯಕ್ರಮದಲ್ಲಿ ಅಮ್ಮ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷೆ ಲಲಿತಾ ಶರಣಪ್ಪ ಗೊಳಗೊಳಕಿ, ಗದಗಬೆಟಗೇರಿ ನಗರಸಭೆಯ ನಾಮನಿರ್ದೇಶಿತ ಸದಸ್ಯ ಶರಣಪ್ಪ ಗೊಳಗೊಳಕಿ, ಆಶ್ರಯ ಸಮಿತಿ ನಾಮನಿರ್ದೇಶಿತ ಸದಸ್ಯ ಇಮಾಮ್ ಹುಸೇನ್ ರೋಣದ, ಜಾಕೀರಸಾಬ ಅಂಗಡಿ, ಚನ್ನಪ್ಪ ಹರದೊಳ್ಳಿ, ಭಾಷಾಸಾಬ ರೋಣದ, ಹನುಮಂತಪ್ಪ ಕೋಟೆಕಲ್ಲ, ಅನ್ವರಸಾಬ ದೋಟಿಹಾಳ, ಮುನ್ನಾಸಾಬ ಹೆಬಸೂರ, ಯಲ್ಲನಗೌಡ ಸೋಮನಕಟ್ಟಿ, ವಿನಯ್ ಮಂಜರಗಿ, ಸಯ್ಯದ್‌ಸಾಬ್ ತಹಸೀಲ್ದಾರ್, ಫಕ್ರುಸಾಬ್ ಬಡಿಗೇರ, ನಾಗರಾಜ ಹಿರೇಮನಿ ಪಾಟೀಲ್, ಪ್ರಭುಕುಮಾರ ಗೋಳಗೊಳಕಿ, ದೇವೇಂದ್ರ, ಗಂಗಪ್ಪನವರ, ಬಸವರಾಜ ಮೈಲಪ್ಪನವರ, ಬಸವರಾಜ ಹೊಟ್ಟಿ ಸೇರಿದಂತೆ ವಾರ್ಡ್ ನಂ. 11ರ ಹಿರಿಯರು, ಹಮಾಲರ ಕಾಲೋನಿಯ ನಿವಾಸಿಗಳು, ಯುವಕರು ಹಾಗೂ ಗಣ್ಯರು ಉಪಸ್ಥಿತರಿದ್ದರು.

---

### ಸೇವೆ, ಶಿಕ್ಷಣ ಮತ್ತು ಮಹಿಳಾ ಸಬಲೀಕರಣಕ್ಕೆ ಇನ್ನಷ್ಟು ಚುರುಕು ನೀಡುವ ಸಂಕಲ್ಪ

# ಇನ್ನರ್ ವೀಲ್ ಕ್ಲಬ್‌ಗೆ ನೂತನ ಪದಾಧಿಕಾರಿಗಳ ಪದಗ್ರಹಣ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸ್ನೇಹ ಮತ್ತು ಸೇವೆಯ ಧ್ಯೇಯದೊಂದಿಗೆ ಸಮಾಜಮುಖಿ ಚಟುವಟಿಕೆಗಳನ್ನು ನಡೆಸುತ್ತಿರುವ ಲಕ್ಷ್ಮೇಶ್ವರ ಇನ್ನರ್ ವೀಲ್ ಕ್ಲಬ್ನ 202627ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಜುಲೈ 26ರಂದು ನಡೆಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಇಎಸ್‌ಓ ವಿರಾಜ್ ಕೋಟಕ್ ನೂತನ ಪದಾಧಿಕಾರಿಗಳಿಗೆ ಪ್ರಮಾಣವಚನ ಬೋಧಿಸಿದರು. ಅಧ್ಯಕ್ಷರಾಗಿ ಮಂಜುಳಾ ಸತ್ಯಪ್ಪನವರ, ಕಾರ್ಯದರ್ಶಿಯಾಗಿ ನಿರ್ಮಲ ಅಡವಿ, ಖಜಾಂಚಿಯಾಗಿ ಮಂಜುಳಾ ಅಕ್ಕಿ, ಐಎಸ್‌ಓ ಆಗಿ ಅಪೂರ್ವ ಪಾಟೀಲ್ ಹಾಗೂ ಎಡಿಟರ್ ಆಗಿ ಶ್ರುತಿ ಹೂವಿನ ಅಧಿಕಾರ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಕ್ಲಬ್‌ನ ಸಂಸ್ಥಾಪಕ ಅಧ್ಯಕ್ಷೆ ಮಾಲಾ ದಂದರಗಿ ಅವರಿಗೆ ಸಮಾಜಸೇವೆ ಹಾಗೂ ಸಂಘಟನೆಯ ಬೆಳವಣಿಗೆಗೆ ನೀಡಿದ ಗಮನಾರ್ಹ ಕೊಡುಗೆಯನ್ನು ಗುರುತಿಸಿ ಇನ್ನರ್ ವೀಲ್ ಡಿಸ್ಟ್ರಿಕ್ಟ್317 ವತಿಯಿಂದ ಪ್ರಶಂಸನಾ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

ಸನ್ಮಾನದ ಬಳಿಕ ಮಾತನಾಡಿದ ವಿರಾಜ್ ಕೋಟಕ್, 1924ರ ಜನವರಿ 10ರಂದು ಮಾರ್ಗರೇಟ್ ಆಲಿವರ್ ಗೋಲ್ಡಿಂಗ್ ಸ್ಥಾಪಿಸಿದ ಇನ್ನರ್ ವೀಲ್ ಸಂಸ್ಥೆ ಇಂದು 103ಕ್ಕೂ ಹೆಚ್ಚು ರಾಷ್ಟ್ರಗಳಲ್ಲಿ ಮಹಿಳೆಯರ ನೇತೃತ್ವದಲ್ಲಿ ಸೇವಾ ಕಾರ್ಯಗಳನ್ನು ನಡೆಸುತ್ತಿದ್ದು, ಶಿಕ್ಷಣ, ಆರೋಗ್ಯ, ಪರಿಸರ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಮಾಜಮುಖಿ ಸೇವೆ ಸಲ್ಲಿಸುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದ ಆರಂಭದಲ್ಲಿ ಸುಜಯ್ ಕಲಾ ಬಳಗದ ಕಲಾವಿದೆಯರು ನೃತ್ಯರೂಪಕದ ಮೂಲಕ ಪ್ರಾರ್ಥನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕಲಾವತಿ ಆವಟೆ, ಶಕುಂತಲಾ ಆಳಗವಾಡಿ, ಸರೋಜಾ ಬನ್ನೂರು, ಶಾರದ ಮಹಾಂತ ಶೆಟ್ಟರ್, ಅನ್ನಪೂರ್ಣ ಮಹಾಂತ ಶೆಟ್ಟರ್, ಶಿಲ್ಪ ಸತ್ಯಪ್ಪನವರ, ಗೌರಮ್ಮ ಮಹಾಂತ ಶೆಟ್ಟರ್, ಗೀತಾ ಮಹಾಂತ ಶೆಟ್ಟರ್, ಜಯಾ ಮಹಾಂತ ಶೆಟ್ಟರ್ ಸೇರಿದಂತೆ ಕ್ಲಬ್ ಸದಸ್ಯೆಯರು, ಮಹಿಳೆಯರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

ರೇಖಾ ಒಡಕಣ್ಣವರ, ಸುಲೋಚನಾ ಜವಾಯಿ, ನಿರ್ಮಲ ಅರಳಿ ಹಾಗೂ ನಿರ್ಮಲ ಅಡವಿ ಕಾರ್ಯಕ್ರಮ ನಿರ್ವಹಿಸಿದರು.

**ಸೇವೆ ಮತ್ತು ಸ್ನೇಹದ ಮೌಲ್ಯಗಳನ್ನು ಸಮಾಜದಲ್ಲಿ ಬಿತ್ತುವ ಮೂಲಕ ಇನ್ನರ್ ವೀಲ್ ಸಂಸ್ಥೆ ಮಹಿಳಾ ಸಬಲೀಕರಣ ಹಾಗೂ ಸಮಾಜಮುಖಿ ಕಾರ್ಯಗಳಿಗೆ ಹೊಸ ಆಯಾಮ ನೀಡುತ್ತಿದೆ.**

**– ವಿರಾಜ್ ಕೋಟಕ್,** ಜಿಲ್ಲಾ ಇಎಸ್‌ಓ

---

## ಅಖಂಡ ಬಳ್ಳಾರಿ-ವಿಜಯನಗರ ಕಾಂಗ್ರೆಸ್ ಭದ್ರಕೋಟೆ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ರಾಜ್ಯದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷ ಮತ್ತಷ್ಟು ಬಲಿಷ್ಠವಾಗುತ್ತಿದ್ದು, ವಿಶೇಷವಾಗಿ ಅಖಂಡ ಬಳ್ಳಾರಿ-ವಿಜಯನಗರ ಜಿಲ್ಲೆಗಳು ಕಾಂಗ್ರೆಸ್‌ನ ಭದ್ರಕೋಟೆಯಾಗಿವೆ ಎಂದು ಎಐಸಿಸಿ ಕೇಂದ್ರ ಹಾಗೂ ರಾಜ್ಯಗಳ ವೀಕ್ಷಕ ವೇಣುಗೋಪಾಲ್ ರಾವ್ ಹೇಳಿದರು.

ಪಟ್ಟಣದ ಕನಿಕ ಪರಮೇಶ್ವರಿ ಕಲ್ಯಾಣ ಮಂಟಪದಲ್ಲಿ ಕಾಂಗ್ರೆಸ್ ಪಕ್ಷ ಆಯೋಜಿಸಿದ್ದ 'ಸಂಘಟನಾ ಸೃಜನ್ ಅಭಿಯಾನ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇಶಾದ್ಯಂತ ಕಾಂಗ್ರೆಸ್ ಸಂಘಟನೆ ಬಲಿಷ್ಠವಾಗಿದ್ದು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಹಾಗೂ ಸೋನಿಯಾ ಗಾಂಧಿ ಅವರ ನಾಯಕತ್ವದಲ್ಲಿ ಪಕ್ಷ ಮತ್ತಷ್ಟು ಬಲಗೊಳ್ಳುತ್ತಿದೆ. ಮುಂದಿನ ದಿನಗಳಲ್ಲಿ ರಾಷ್ಟ್ರಾದ್ಯಂತ ಕಾಂಗ್ರೆಸ್ ತನ್ನ ಪ್ರಭಾವವನ್ನು ವಿಸ್ತರಿಸಲಿದೆ. ಕಾಂಗ್ರೆಸ್ ಆಲದ ಮರದಂತಿದ್ದು, ಅದರ ಬೇರುಗಳನ್ನು ಯಾರಿಂದಲೂ ಅಲ್ಲಾಡಿಸಲು ಸಾಧ್ಯವಿಲ್ಲ ಎಂದು ಹೇಳಿದರು.

---

### ಆಗಸ್ಟ್ 1 ಮತ್ತು 2ರಂದು 2000-2001ರ ಸಹಪಾಠಿಗಳ ಭಾವನಾತ್ಮಕ ಪುನರ್ಮಿಲನ

# ಶತಮಾನದ ಸಂಭ್ರಮದಲ್ಲಿ ಅರಳಿದ ಬಾಲ್ಯದ ನೆನಪುಗಳು...

ಶಾಲೆಯ ಶತಮಾನೋತ್ಸವದ ಅಂಗವಾಗಿ ಎರಡು ದಿನಗಳ ವಿಶೇಷ ಸಂಭ್ರಮ, ಎರಡು ದಶಕಗಳ ಬಳಿಕ ಮತ್ತೆ ಒಂದಾಗಲಿರುವ ಸಹಪಾಠಿಗಳು, ಭಾವುಕರಾಗಲಿರುವ ಶಿಕ್ಷಕರು-ಹಳೆ ವಿದ್ಯಾರ್ಥಿಗಳು

ಕೆಲವು ಫೋಟೋಗಳು ಕೇವಲ ಚಿತ್ರಗಳಲ್ಲ, ಬದುಕಿನ ಅಮೂಲ್ಯ ನೆನಪುಗಳಾಗಿರುತ್ತವೆ. 2000-2001ನೇ ಸಾಲಿನ 7ನೇ ತರಗತಿಯ ವಿದ್ಯಾರ್ಥಿಗಳ ಈ ಅಪರೂಪದ ಗುಂಪುಚಿತ್ರವೂ ಅಂತಹದ್ದೇ ಒಂದು ನೆನಪಿನ ಭಂಡಾರ. ಮುಗ್ಧ ನಗು, ಸರಳ ಶಾಲಾ ಸಮವಸ್ತ್ರ, ಸ್ನೇಹದ ಆತ್ಮೀಯತೆ ಮತ್ತು ಕನಸುಗಳಿಂದ ತುಂಬಿದ ಬಾಲ್ಯ ಇವೆಲ್ಲವೂ ಇಂದಿಗೂ ಮನಸ್ಸನ್ನು ಭಾವುಕರನ್ನಾಗಿಸುತ್ತವೆ.

ಸುಮಾರು ಇಪ್ಪತ್ತೈದು ವರ್ಷಗಳ ಬಳಿಕ, ಶಾಲೆಯ ಶತಮಾನೋತ್ಸವದ ಸಂಭ್ರಮದ ಅಂಗವಾಗಿ ಆಗಸ್ಟ್ 1 ಮತ್ತು 2ರಂದು ನಡೆಯಲಿರುವ ವಿಶೇಷ ಕಾರ್ಯಕ್ರಮದಲ್ಲಿ ಅಂದಿನ ಸಹಪಾಠಿಗಳು ಮತ್ತೆ ಒಂದೇ ವೇದಿಕೆಯಲ್ಲಿ ಸೇರುತ್ತಿದ್ದಾರೆ. ಇದು ಕೇವಲ ಹಳೆಯ ವಿದ್ಯಾರ್ಥಿಗಳ ಭೇಟಿ ಮಾತ್ರವಲ್ಲ, ಬಾಲ್ಯದ ನೆನಪುಗಳನ್ನು ಮೆಲುಕು ಹಾಕುವ, ಸ್ನೇಹದ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವ ಹಾಗೂ ತಮ್ಮನ್ನು ರೂಪಿಸಿದ ಶಾಲೆಗೆ ಕೃತಜ್ಞತೆ ಸಲ್ಲಿಸುವ ಅಪರೂಪದ ಕ್ಷಣವಾಗಿದೆ.

ಕಾಲದ ಹರಿವಿನಲ್ಲಿ ಪ್ರತಿಯೊಬ್ಬರೂ ತಮ್ಮ ತಮ್ಮ ಬದುಕಿನ ದಾರಿಯನ್ನು ಹಿಡಿದಿದ್ದಾರೆ. ಉದ್ಯೋಗ, ಕೃಷಿ, ವ್ಯಾಪಾರ, ಕುಟುಂಬದ ಜವಾಬ್ದಾರಿಗಳ ನಡುವೆ ಜೀವನ ಸಾಗಿದರೂ, ಶಾಲೆಯ ಮೇಲಿನ ಅಭಿಮಾನ ಮತ್ತು ಸಹಪಾಠಿಗಳ ಮೇಲಿನ ಪ್ರೀತಿ ಮಾತ್ರ ಎಂದಿಗೂ ಮಸುಕಾಗಿಲ್ಲ. ಈಗ ಶತಮಾನೋತ್ಸವದ ನೆಪದಲ್ಲಿ ಎಲ್ಲರೂ ಮತ್ತೆ ಒಂದಾಗುತ್ತಿರುವುದು ಅವರ ಪಾಲಿಗೆ ಜೀವನದ ಅತ್ಯಂತ ಸಂತಸದ ಕ್ಷಣವಾಗಿದೆ.

ಅಂದಿನ ತರಗತಿ ಕೊಠಡಿಗಳು, ಕಪ್ಪು ಹಲಗೆ, ಶಾಲೆಯ ಗಂಟೆಯ ಶಬ್ದ, ಮಧ್ಯಾಹ್ನದ ಆಟ, ಶಿಕ್ಷಕರ ಪ್ರೀತಿ-ಬೈಗುಳ, ಸ್ನೇಹಿತರೊಂದಿಗೆ ಹಂಚಿಕೊಂಡ ಊಟ, ಪರೀಕ್ಷೆಯ ಆತಂಕ, ಫಲಿತಾಂಶದ ಸಂಭ್ರಮಇವೆಲ್ಲವೂ ಈ ಎರಡು ದಿನಗಳ ಸಂಭ್ರಮದಲ್ಲಿ ಮತ್ತೊಮ್ಮೆ ಜೀವಂತವಾಗಲಿವೆ. ವರ್ಷಗಳ ಬಳಿಕ ಶಿಕ್ಷಕರನ್ನು ಭೇಟಿಯಾಗಿ ಅವರ ಆಶೀರ್ವಾದ ಪಡೆಯುವುದು ಹಾಗೂ ಹಳೆಯ ನೆನಪುಗಳನ್ನು ಹಂಚಿಕೊಳ್ಳುವುದು ಎಲ್ಲರಿಗೂ ಮರೆಯಲಾಗದ ಅನುಭವವಾಗಲಿದೆ.

ಈ ಐತಿಹಾಸಿಕ ಪುನರ್ಮಿಲನದಲ್ಲಿ ಭಾಗವಹಿಸುತ್ತಿರುವ 2000-2001ರ 7ನೇ ತರಗತಿ ವಿದ್ಯಾರ್ಥಿಗಳು: ಶರಣಪ್ಪ ನಾಗೇಂದ್ರಗಡ, ವಿ.ಎನ್. ರೊಟ್ಟಿ, ಶರಣಪ್ಪ ಮುದೇನೂರ, ಉಮೇಶ್ ಆಡಿನ, ಉಮೇಶ್ ಅಂಗಡಿ, ಭೀಮಪ್ಪ ಬಾರಕೇರ, ವೀರೇಶ್ ಬೂದಿಹಾಳ್, ಗೀತಾ ಜೇನುಬೇಟಿಗಾರ, ರೂಪಾ ಜೋಷಿ, ಶಾವು, ಈರಮ್ಮ ಜಾಲಿಹಾಳ್, ಶೈಲಾ ನಗರಹಾಳ್, ರತ್ನ ಬಡಿಗೇರ, ಮಾನವ್ವ ಕಮ್ಮಾರ, ಶರಣಪ್ಪ ಹಂಡಿ ಹಾಗೂ ಇನ್ನಿತರ ಸಹಪಾಠಿಗಳು.

ಕಾರ್ಯಕ್ರಮದಲ್ಲಿ ಗ್ರಾಮದ ಹಿರಿಯರಾದ ಶಿವಾನಂದಯ್ಯ ಮಠದ, ಅಶೋಕ್ ಜಿಗಳೂರು, ಶರಣಪ್ಪ ಕುರಿ, ಪರಶುರಾಮ್ ಹಂಡಿ, ಹುಲ್ಲಪ್ಪ ಹರಿಹರ ಹಾಗೂ ನಿಂಗಪ್ಪ ಹಂಡಿ ಸೇರಿದಂತೆ ಗ್ರಾಮದ ಗುರು-ಹಿರಿಯರು ಹಾಗೂ ಹಳೆ ವಿದ್ಯಾರ್ಥಿಗಳು ಭಾಗವಹಿಸಿ





ಶತಮಾನೋತ್ಸವದ ಸಂಭ್ರಮಕ್ಕೆ ಮೆರುಗು ತರಲಿದ್ದಾರೆ. ಒಬ್ಬ ವ್ಯಕ್ತಿಯ ಬದುಕಿನ ಭದ್ರ ಅಡಿಪಾಯವನ್ನು ಹಾಕುವುದು ಶಾಲೆ. ಅಕ್ಷರ ಜ್ಞಾನ, ಸಂಸ್ಕಾರ, ಶಿಸ್ತು, ಸ್ನೇಹ ಮತ್ತು ಮಾನವೀಯತೆಯ ಮೌಲ್ಯಗಳನ್ನು ಕಲಿಸಿದ ಈ ಶಾಲೆಗೆ ಕೃತಜ್ಞತೆ ಸಲ್ಲಿಸುವ ಸುವರ್ಣ ಅವಕಾಶವೇ ಈ ಶತಮಾನೋತ್ಸವ. ಆಗಸ್ಟ್ 1 ಮತ್ತು 2ರಂದು ನಡೆಯಲಿರುವ ಈ ಐತಿಹಾಸಿಕ ಸಮಾರಂಭವು ಕೇವಲ ಹಳೆಯ ವಿದ್ಯಾರ್ಥಿಗಳ ಪುನರ್ಮಿಲನವಲ್ಲ, ಮುಂದಿನ ಪೀಳಿಗೆಗೆ ಶಾಲೆಯ ಪರಂಪರೆ, ಮೌಲ್ಯಗಳು ಹಾಗೂ ಸ್ನೇಹದ ಮಹತ್ವವನ್ನು ಸಾರುವ ಸ್ಮರಣೀಯ ಕ್ಷಣವಾಗಲಿದೆ.

ಬಾಲ್ಯದ ನೆನಪುಗಳು ಎಂದಿಗೂ ಹಸಿರಾಗಿರುತ್ತವೆ. ಆ ನೆನಪುಗಳನ್ನು ಮತ್ತೊಮ್ಮೆ ಜೀವಂತಗೊಳಿಸುತ್ತಿರುವ ಈ ಶತಮಾನೋತ್ಸವವು ಎಲ್ಲರ ಬದುಕಿನ ಸುವರ್ಣ ಅಧ್ಯಾಯವಾಗಿ ಶಾಶ್ವತವಾಗಿ ಉಳಿಯಲಿ ಎಂಬ ಆಶಯದೊಂದಿಗೆ 2000-2001ರ ತಂಡ ಸಂಭ್ರಮದ ಕ್ಷಣಗಳನ್ನು ಎದುರು ನೋಡುತ್ತಿದೆ.

## ಸಂಕ್ಷಿಪ್ತ ಸುದ್ದಿಗಳು

### ಕೆಐಎಡಿಬಿ ಸಿಇಒ ಗೋವಿಂದ ರೆಡ್ಡಿಗೆ ಮನವಿ

# ಗದಗ ಕೈಗಾರಿಕಾ ಅಭಿವೃದ್ಧಿಗೆ ಚುರುಕು ನೀಡಲು ಚೇಂಬರ್ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಕೈಗಾರಿಕಾ ಅಭಿವೃದ್ಧಿಗೆ ಅಗತ್ಯ ಕ್ರಮಗಳನ್ನು ತ್ವರಿತವಾಗಿ ಕೈಗೊಂಡು, ಬಾಕಿ ಉಳಿದಿರುವ ಯೋಜನೆಗಳಿಗೆ ವೇಗ ನೀಡುವಂತೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗೋವಿಂದ ರೆಡ್ಡಿ ಅವರಿಗೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ (ಚೇಂಬರ್ ಆಫ್ ಕಾಮರ್ಸ್) ಮನವಿ ಸಲ್ಲಿಸಿತು.

ಬೆಂಗಳೂರಿನ ಕರ್ನಾಟಕ ಚೇಂಬರ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರೀಸ್‌ನಲ್ಲಿ ನಡೆದ ಸಭೆಯಲ್ಲಿ ಫೆಡರೇಷನ್ ಆಫ್ ಕರ್ನಾಟಕ ಚೇಂಬರ್ಸ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರಿ (ಎಫ್‌ಕೆಸಿಸಿಐ) ಪದಾಧಿಕಾರಿಗಳ ಸಮ್ಮುಖದಲ್ಲಿ, ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ನೇತೃತ್ವದ ನಿಯೋಗ ಗದಗ ಜಿಲ್ಲೆಯ ಕೈಗಾರಿಕಾ ಸಮಸ್ಯೆಗಳು ಹಾಗೂ ಅಭಿವೃದ್ಧಿ ಬೇಡಿಕೆಗಳ ಕುರಿತು ವಿವರವಾದ ಮನವಿ ಪತ್ರ ಸಲ್ಲಿಸಿತು.

ಮನವಿಯಲ್ಲಿ, ಗದಗ ಮತ್ತು ಬಾಗಲಕೋಟೆ ಜಿಲ್ಲೆಗಳ ಜವಾಬ್ದಾರಿಯನ್ನು ಒಬ್ಬರೇ ಜಂಟಿ ನಿರ್ದೇಶಕರು ನಿರ್ವಹಿಸುತ್ತಿರುವುದರಿಂದ ಉದ್ಯಮಿಗಳಿಗೆ ತೊಂದರೆಯಾಗುತ್ತಿದ್ದು, ಗದಗ ಜಿಲ್ಲೆಗೆ ಪ್ರತ್ಯೇಕ ಪೂರ್ಣಾವಧಿ ಜಂಟಿ ನಿರ್ದೇಶಕರನ್ನು ನೇಮಿಸಬೇಕು ಎಂದು ಒತ್ತಾಯಿಸಲಾಯಿತು.

ಇದಲ್ಲದೆ, 216 ಎಕರೆ ವಿಸ್ತೀರ್ಣದ ನರಸಾಪುರ ಕೈಗಾರಿಕಾ ಪ್ರದೇಶದ ಭೂಸ್ವಾಧೀನ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಿ ಉದ್ಯಮಿಗಳಿಗೆ ನಿವೇಶನ ಹಂಚಿಕೆ ಮಾಡಬೇಕು ಎಂದು ಮನವಿ ಮಾಡಲಾಯಿತು. ಈ ಯೋಜನೆ ಅನುಷ್ಠಾನಗೊಂಡರೆ ಜಿಲ್ಲೆಯ ನೂರಾರು ಯುವಕರಿಗೆ ಉದ್ಯೋಗಾವಕಾಶ ಸೃಷ್ಟಿಯಾಗಲಿದೆ ಎಂದು ನಿಯೋಗ ತಿಳಿಸಿತು.

ಗದಗಹಾಲಕೆರೆ ಮಠ ರಸ್ತೆಯಲ್ಲಿರುವ ಮುಧೋಳ ಕೈಗಾರಿಕಾ ಪ್ರದೇಶದಲ್ಲಿ ರಸ್ತೆ, ಕುಡಿಯುವ ನೀರು, ಒಳಚರಂಡಿ ಸೇರಿದಂತೆ ಮೂಲಸೌಕರ್ಯಗಳ ಕೊರತೆಯಿಂದ ಉದ್ಯಮಿಗಳು ಸಂಕಷ್ಟ ಎದುರಿಸುತ್ತಿದ್ದಾರೆ. ಆದ್ದರಿಂದ ಅಗತ್ಯ ಮೂಲಸೌಕರ್ಯಗಳನ್ನು ತುರ್ತಾಗಿ ಕಲ್ಪಿಸಬೇಕು ಎಂದು ಆಗ್ರಹಿಸಲಾಯಿತು.


ಮನವಿ ಸ್ವೀಕರಿಸಿದ ಕೆಐಎಡಿಬಿ ಸಿಇಒ ಗೋವಿಂದ ರೆಡ್ಡಿ, ಗದಗ ಜಿಲ್ಲೆಯ ಕೈಗಾರಿಕಾ ಅಭಿವೃದ್ಧಿಯ ಮಹತ್ವವನ್ನು ಸರ್ಕಾರ ಅರಿತಿದ್ದು, ಸಲ್ಲಿಸಿರುವ ಬೇಡಿಕೆಗಳನ್ನು ಸಂಬಂಧಪಟ್ಟ ಇಲಾಖೆಗಳೊಂದಿಗೆ ಚರ್ಚಿಸಿ ಸಾಧ್ಯವಾದಷ್ಟು ಬೇಗ ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ನಿಯೋಗದಲ್ಲಿ ಸಂಸ್ಥೆಯ ಕಾರ್ಯದರ್ಶಿ ಚನ್ನವೀರಪ್ಪ ಹುಣಶಿಕಟ್ಟಿ, ಮಾಜಿ ಅಧ್ಯಕ್ಷ ರಾಮನಗೌಡ ದಾನಪ್ಪಗೌಡ್ರ, ಸೇರಿದಂತೆ ಇತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

> **ಗದಗ ಜಿಲ್ಲೆಯ ಕೈಗಾರಿಕಾ ಅಭಿವೃದ್ಧಿಗೆ ಸಂಬಂಧಿಸಿದ ಬೇಡಿಕೆಗಳು ನ್ಯಾಯಸಮ್ಮತವಾಗಿವೆ. ಸರ್ಕಾರದ ಗಮನಕ್ಕೆ ತಂದು ಶೀಘ್ರ ಕ್ರಮ ಕೈಗೊಳ್ಳಲು ಪ್ರಯತ್ನಿಸಲಾಗುವುದು.**
>
> – **ಗೋವಿಂದ ರೆಡ್ಡಿ,** ಸಿಇಒ, ಕೆಐಎಡಿಬಿ

### ಗದಗನಲ್ಲಿ ಮಾತೃವಂದನಾ ಯೋಜನೆ ಕುರಿತು ತರಬೇತಿ ಕಾರ್ಯಾಗಾರದಲ್ಲಿ ನೀಲಗುಂದ

# ತಾಯಿಮಗುವಿನ ಆರೋಗ್ಯಕ್ಕೆ ಸಮರ್ಪಕ ಪೌಷ್ಠಿಕತೆ ಅಗತ್ಯ



**ವಿಜಯಸಾಕ್ಷಿ ಸುದ್ದಿ, ಗದಗ**

ಗರ್ಭಿಣಿಯರ ಅಪೌಷ್ಠಿಕತೆ ಹಾಗೂ ರಕ್ತಹೀನತೆ ನಿವಾರಣೆಯಲ್ಲಿ ವಿವಿಧ ಸರ್ಕಾರಿ ಇಲಾಖೆಗಳ ಸಮನ್ವಯ ಅತ್ಯಂತ ಮಹತ್ವದ್ದಾಗಿದ್ದು, ಆರೋಗ್ಯವಂತ ತಾಯಿ ಹಾಗೂ ಶಿಶು ನಿರ್ಮಾಣಕ್ಕೆ ಪ್ರತಿಯೊಬ್ಬರೂ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಹೇಳಿದರು.

ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಪಂಚಾಯಿತಿ ಸಭಾಭವನದಲ್ಲಿ ಶುಕ್ರವಾರ ಆಯೋಜಿಸಿದ್ದ ಪ್ರಧಾನಮಂತ್ರಿ ಮಾತೃವಂದನಾ ಯೋಜನೆ ಮತ್ತು ಗರ್ಭಿಣಿಯರ ಪೌಷ್ಠಿಕತೆ ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ಜಯಶ್ರೀ ಆರ್. ಕಾರ್ಯಕ್ರಮದ ಉದ್ದೇಶ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಜಿ. ಮಣ್ಣೂರ ಮಾತನಾಡಿ, ತರಬೇತಿಯ ಮಾಹಿತಿಯನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವಂತೆ ಅಧಿಕಾರಿಗಳಿಗೆ ಸಲಹೆ ನೀಡಿದರು.

ಐಪಿಇ ಗ್ಲೋಬಲ್ ಜಿಲ್ಲಾ ಬೆಂಬಲ ವ್ಯವಸ್ಥಾಪಕ ಯಲ್ಲಪ್ಪ ಕೆ. ಅವರು ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡು ಪ್ರಧಾನಮಂತ್ರಿ ಮಾತೃವಂದನಾ ಯೋಜನೆ ಹಾಗೂ ಗರ್ಭಿಣಿಯರ ಪೌಷ್ಠಿಕತೆ ಕುರಿತು ಮಾಹಿತಿ ನೀಡಿದರು.

ತರಬೇತಿ ಕಾರ್ಯಾಗಾರದಲ್ಲಿ ಜಿಲ್ಲೆಯ ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಹಿರಿಯ ಮೇಲ್ವಿಚಾರಕಿಯರು, ಮೇಲ್ವಿಚಾರಕಿಯರು, ಪೋಷಣ ಅಭಿಯಾನ ಯೋಜನೆಯ ತಾಲೂಕು ಸಂಯೋಜಕರು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

ಮೇಲ್ವಿಚಾರಕಿ ರೇಣುಕಾ ಚಂದ್ರಣ್ಣವರ ಪ್ರಾರ್ಥಿಸಿದರು. ಜಿಲ್ಲಾ ನಿರೂಪಣಾಧಿಕಾರಿ ಮಹಾಂತಸ್ವಾಮಿ ಪೂಜಾರ ಸ್ವಾಗತಿಸಿದರು. ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯ ಜಿಲ್ಲಾ ಸಂಯೋಜಕಿ ನೇತ್ರಾ, ಹರ್ತಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

### ಮೂರು ದಶಕಗಳಿಗೂ ಹೆಚ್ಚು ಕಾಲ ಪತ್ರಿಕೋದ್ಯಮದಲ್ಲಿ ಸತ್ಯದ ಧ್ವನಿಯಾಗಿ ಗುರುತಿಸಿಕೊಂಡ ಹಿರಿಯ ಪತ್ರಕರ್ತ ಅನಂತ ಕಾರ್ಕಳ

# ಕಾಲದೊಂದಿಗೆ ಬೆಳೆದ ವ್ಯಕ್ತಿತ್ವ, ಮೌಲ್ಯಗಳೊಂದಿಗೆ ಅರಳಿದ ಬದುಕು..!

ಒಬ್ಬ ವ್ಯಕ್ತಿಯ ಸಾಧನೆಯನ್ನು ಅವರು ಅಲಂಕರಿಸಿದ ಹುದ್ದೆಗಳಿಂದ ಅಳೆಯಲು ಸಾಧ್ಯವಿಲ್ಲ. ಅವರು ಸಮಾಜಕ್ಕೆ ನೀಡಿದ ಕೊಡುಗೆ, ಉಳಿಸಿದ ಮೌಲ್ಯಗಳು ಮತ್ತು ಜನರ ಮನಸ್ಸಿನಲ್ಲಿ ಮೂಡಿಸಿದ ವಿಶ್ವಾಸವೇ ಅವರ ವ್ಯಕ್ತಿತ್ವದ ನಿಜವಾದ ಅಳತೆ. ಹಿರಿಯ ಪತ್ರಕರ್ತ ಡಾ. ಅನಂತ ಕಾರ್ಕಳ ಅವರ ಬದುಕು ಈ ಮಾತಿಗೆ ಜೀವಂತ ಸಾಕ್ಷಿಯಾಗಿದೆ.

ಮೂರು ದಶಕಗಳಿಗೂ ಹೆಚ್ಚು ಕಾಲ ಮುದ್ರಣ ಹಾಗೂ ದೃಶ್ಯ ಮಾಧ್ಯಮ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಅವರು, ತಮ್ಮ ಲೇಖನಿ, ನೇರ ನುಡಿ ಮತ್ತು ಸಾಮಾಜಿಕ ಬದ್ಧತೆಯ ಮೂಲಕ ಅಸಂಖ್ಯಾತ ಜನರ ವಿಶ್ವಾಸ ಗಳಿಸಿದ್ದಾರೆ. ಅವರ ಪತ್ರಿಕೋದ್ಯಮ ಕೇವಲ ಸುದ್ದಿಗಳ ಪ್ರಸಾರಕ್ಕೆ ಸೀಮಿತವಾಗಿರದೆ, ಸಮಾಜದ ಸಮಸ್ಯೆಗಳಿಗೆ ಧ್ವನಿಯಾಗುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಿದೆ.

ಗದಗದ ನೆಲದಲ್ಲಿ ಆರಂಭವಾದ ಅವರ ಪತ್ರಿಕೋದ್ಯಮದ ಪಯಣ, ರಾಜ್ಯದ ಪ್ರಮುಖ ಪತ್ರಿಕೆಗಳು ಹಾಗೂ ದೂರದರ್ಶನ ಮಾಧ್ಯಮಗಳವರೆಗೆ ವಿಸ್ತರಿಸಿತು. ವರದಿಗಾರ, ಸಂಪಾದಕ ಮತ್ತು ಹಿರಿಯ ಪತ್ರಕರ್ತರಾಗಿ ವಿವಿಧ ಹಂತಗಳಲ್ಲಿ ಕಾರ್ಯನಿರ್ವಹಿಸಿದ ಅವರು, ಸತ್ಯ, ನಿಷ್ಪಕ್ಷಪಾತತೆ ಮತ್ತು ಜನಪರ ನಿಲುವಿನಿಂದ ತಮ್ಮದೇ ಆದ ಛಾಪು ಮೂಡಿಸಿದ್ದಾರೆ.

ಸಮಾಜದ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳುವುದು, ಆಡಳಿತದ ವೈಫಲ್ಯಗಳನ್ನು ಪ್ರಶ್ನಿಸುವುದು ಮತ್ತು ಜನರ ಪರವಾಗಿ ಧ್ವನಿ ಎತ್ತುವುದು ಅವರ ವೃತ್ತಿ ಜೀವನದ ಧ್ಯೇಯವಾಗಿತ್ತು.



ಈ ಕಾರಣದಿಂದಲೇ ಅವರ ಲೇಖನಗಳು ಕೇವಲ ಸುದ್ದಿಗಳಾಗಿರದೆ, ಜನರ ಆಶಯಗಳ ಪ್ರತಿಬಿಂಬವಾಗಿ ಗುರುತಿಸಿಕೊಂಡಿವೆ.

ಸ್ನಾತಕೋತ್ತರ ಪದವಿ, ಬಿ.ಎಡ್., ಎಲ್.ಎಲ್.ಬಿ. ಹಾಗೂ ಗೌರವ ಡಾಕ್ಟರೇಟ್ ಪದವಿಗಳನ್ನು ಪಡೆದಿರುವ ಡಾ. ಅನಂತ ಕಾರ್ಕಳ ಅವರು ಜ್ಞಾನ ಮತ್ತು ಅನುಭವದ ಅಪೂರ್ವ ಸಂಗಮವಾಗಿದ್ದಾರೆ. ನಿರಂತರ ಅಧ್ಯಯನ ಹಾಗೂ ವೃತ್ತಿ ಬದ್ಧತೆಯ ಮೂಲಕ ಪತ್ರಿಕೋದ್ಯಮದ ಹೊಸ ತಲೆಮಾರಿಗೆ ಪ್ರೇರಣೆಯಾಗಿದ್ದಾರೆ.

ಪತ್ರಕರ್ತರ ಸಂಘಟನೆಗಳಲ್ಲಿಯೂ ಅವರು ಮಹತ್ವದ ಜವಾಬ್ದಾರಿಗಳನ್ನು ನಿರ್ವಹಿಸಿದ್ದು, ಹೋರಾಟದ ಸಂದರ್ಭದಲ್ಲಿ ನಾಯಕನಾಗಿ, ಮಾರ್ಗದರ್ಶನದ ವೇಳೆ ಹಿರಿಯನಾಗಿ ಹಾಗೂ ಸಂಕಷ್ಟದ ಸಂದರ್ಭಗಳಲ್ಲಿ ಸಹೋದ್ಯೋಗಿಗಳ ಬೆನ್ನೆಲುಬಾಗಿ ನಿಂತಿದ್ದಾರೆ.

ಸರಳತೆ, ಸಜ್ಜನಿಕೆ, ಸತ್ಯನಿಷ್ಠೆ ಮತ್ತು ಮಾನವೀಯ ಮೌಲ್ಯಗಳು ಅವರ ವ್ಯಕ್ತಿತ್ವದ ಪ್ರಮುಖ ಆಧಾರಸ್ತಂಭಗಳಾಗಿವೆ. ಬದಲಾಗುತ್ತಿರುವ ಕಾಲಘಟ್ಟದಲ್ಲಿಯೂ ವೃತ್ತಿಯ ಮೌಲ್ಯಗಳನ್ನು ಉಳಿಸಿಕೊಂಡು ಪತ್ರಿಕೋದ್ಯಮದ ಗೌರವವನ್ನು ಹೆಚ್ಚಿಸಿದ ಅಪರೂಪದ ಪತ್ರಕರ್ತರ ಸಾಲಿನಲ್ಲಿ ಅವರು ಗುರುತಿಸಿಕೊಂಡಿದ್ದಾರೆ.

ಅರವತ್ತು ವರ್ಷಗಳು ಬದುಕಿನ ಒಂದು ಮೈಲಿಗಲ್ಲು ಮಾತ್ರ. ಅನುಭವ, ಚಿಂತನೆ, ಸಾಮಾಜಿಕ ಕಾಳಜಿ ಮತ್ತು ವೃತ್ತಿ ಬದ್ಧತೆಯಿಂದ ಸಮೃದ್ಧವಾಗಿರುವ ಅವರ ಬದುಕು ಇನ್ನಷ್ಟು ಅರ್ಥಪೂರ್ಣವಾಗಲಿ. ಅವರ ಮಾರ್ಗದರ್ಶನ, ಮೌಲ್ಯಗಳು ಮತ್ತು ಲೇಖನಿಯ ಬೆಳಕು ಮುಂದಿನ ಪೀಳಿಗೆಯ ಪತ್ರಕರ್ತರಿಗೆ ಸದಾ ಸ್ಫೂರ್ತಿಯಾಗಲಿ ಎಂಬುದು ಎಲ್ಲರ ಹಾರೈಕೆಯಾಗಿದೆ.

**– ಟಿ. ಎನ್. ಭಾಂಡಗೆ**
**ವಕೀಲರು, ಗದಗ**

### 75 ವರ್ಷ ಮೇಲ್ಪಟ್ಟವರಿಗೆ ಮನೆ ಬಾಗಿಲಿಗೆ ಪಡಿತರ ವಿತರಣೆ: ಅಶೋಕ ಮಂದಾಲಿ

# ಅನ್ನ ಸುವಿಧಾ ಯೋಜನೆ ಹಿರಿಯರ ಘನತೆಯ ಸಂಕೇತ

**ವಿಜಯಸಾಕ್ಷಿ ಸುದ್ದಿ, ಗದಗ**

75 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಮನೆ ಬಾಗಿಲಿಗೆ ಪಡಿತರ ತಲುಪಿಸುವ 'ಅನ್ನ ಸುವಿಧಾ' ಯೋಜನೆ ಹಿರಿಯರ ಘನತೆಯನ್ನು ಕಾಪಾಡುವ ಜನಪರ ಕಾರ್ಯಕ್ರಮವಾಗಿದ್ದು, ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದೆ ಎಂದು ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯದಲ್ಲಿ 75 ವರ್ಷ ಮೇಲ್ಪಟ್ಟ 2.65 ಲಕ್ಷಕ್ಕೂ ಹೆಚ್ಚು ಹಿರಿಯ ನಾಗರಿಕರನ್ನು ಗುರುತಿಸಿ, ಅವರಿಗೆ ಯಾವುದೇ ಅಲೆದಾಟವಿಲ್ಲದೆ ಮನೆ ಬಾಗಿಲಿಗೆ ಪಡಿತರ ತಲುಪಿಸಲಾಗುತ್ತಿದೆ. ಅಸಹಾಯಕ ಹಿರಿಯರು ರೇಷನ್ ಅಂಗಡಿಗಳ ಮುಂದೆ ಸರತಿ ಸಾಲಿನಲ್ಲಿ ನಿಲ್ಲಬೇಕಾದ ಪರಿಸ್ಥಿತಿಯನ್ನು ತಪ್ಪಿಸುವುದೇ ಸರ್ಕಾರದ ಉದ್ದೇಶವಾಗಿದೆ ಎಂದು ಹೇಳಿದರು.

ಆಧಾರ್ ಹಾಗೂ ಮೊಬೈಲ್ ಸಂಖ್ಯೆಯನ್ನು ಜೋಡಿಸಿ ಡಿಜಿಟಲ್ ವ್ಯವಸ್ಥೆಯ ಮೂಲಕ ಯೋಜನೆ



ಅನುಷ್ಠಾನಗೊಳಿಸಲಾಗಿದ್ದು, ಮನೆ ಬಾಗಿಲಿಗೆ ಪಡಿತರ ತಲುಪಿಸುವ ವಿತರಕರಿಗೆ ₹50 ಸೇವಾ ಶುಲ್ಕ ನಿಗದಿಪಡಿಸಲಾಗಿದೆ. ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಹಿರಿಯರಿಗೆ ದೊರೆಯುವ ಹಕ್ಕನ್ನು ಪರಿಣಾಮಕಾರಿಯಾಗಿ ತಲುಪಿಸಲಾಗುತ್ತಿದೆ ಎಂದು ತಿಳಿಸಿದರು. ಪ್ರತಿ ತಿಂಗಳು 1ರಿಂದ 5ನೇ ತಾರೀಖಿನೊಳಗೆ ಪಡಿತರ ವಿತರಣೆ ಮಾಡಲಾಗುತ್ತಿದ್ದು, 'ಅನ್ನ ಸುವಿಧಾ' ಆ್ಯಪ್ ಮೂಲಕ ವಿತರಣೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲಾಗಿದೆ. 1967 ಸಹಾಯವಾಣಿ ಮೂಲಕ ಫಲಾನುಭವಿಗಳ ದೂರುಗಳಿಗೆ ತ್ವರಿತ ಸ್ಪಂದನೆ ನೀಡಲಾಗುತ್ತಿದೆ ಎಂದು ಹೇಳಿದರು. ಸಾರ್ವಜನಿಕ ವಿತರಣಾ ವ್ಯವಸ್ಥೆಯಲ್ಲಿ ಅಕ್ರಮಗಳಿಗೆ ಅವಕಾಶ ನೀಡದಂತೆ ಇ-ಪೋಸ್ (ಛಿ-ಕಟಖ) ಯಂತ್ರಗಳ ಮೂಲಕ ಪಡಿತರ ವಿತರಣೆ ಕಡ್ಡಾಯಗೊಳಿಸಲಾಗಿದ್ದು, ದಾಸ್ತಾನು ಹಾಗೂ ಪೂರೈಕೆ ವ್ಯವಸ್ಥೆಯ ಮೇಲೂ ನಿರಂತರ ನಿಗಾ ವಹಿಸಲಾಗಿದೆ. ಅರ್ಹ ಫಲಾನುಭವಿಗಳಿಗೆ ಆಹಾರ ಧಾನ್ಯ ಸಮರ್ಪಕವಾಗಿ ತಲುಪುವಂತೆ ಸರ್ಕಾರ ಕ್ರಮ ಕೈಗೊಂಡಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> **ಮನೆ ಬಾಗಿಲಿಗೆ ಪಡಿತರ ತಲುಪಿಸುವ ಅನ್ನ ಸುವಿಧಾ ಯೋಜನೆ ಕೇವಲ ಆಹಾರ ವಿತರಣೆಯಲ್ಲ, ಹಿರಿಯ ನಾಗರಿಕರ ಘನತೆ ಮತ್ತು ಹಕ್ಕುಗಳನ್ನು ಗೌರವಿಸುವ ಜನಪರ ಹೆಜ್ಜೆಯಾಗಿದೆ.**
>
> – **ಅಶೋಕ ಮಂದಾಲಿ,** ಅಧ್ಯಕ್ಷರು, ಗದಗ ಜಿಲ್ಲಾ ಪ್ರಚಾರ ಸಮಿತಿ

# ವಿಜಯ ಲಲಿತ ಕಲಾ ಸಂಸ್ಥೆಯಲ್ಲಿ ಸಸಿ ನೆಡುವ ಅಭಿಯಾನ



**ವಿಜಯಸಾಕ್ಷಿ ಸುದ್ದಿ, ಗದಗ**

ವನಮಹೋತ್ಸವ ಅಂಗವಾಗಿ ಸ್ಥಳೀಯ ರಾಜೀವ್ ಗಾಂಧಿ ನಗರದ ಸಾಯಿಬಾಬಾ ದೇವಸ್ಥಾನದ ಹಿಂಭಾಗದಲ್ಲಿರುವ ವಿಜಯ ಲಲಿತ ಕಲಾ ಸಂಸ್ಥೆ ಆವರಣದಲ್ಲಿ ವಿಜಯ ಲಲಿತ ಕಲಾ ಸಂಸ್ಥೆ, ರೋಟರಿ ಕ್ಲಬ್, ಇನ್ನರ್‌ವ್ಹೀಲ್ ಕ್ಲಬ್ ಹಾಗೂ ರೋಟ್ರ್ಯಾಕ್ಟ್ ಕ್ಲಬ್ ಸಂಯುಕ್ತ ಆಶ್ರಯದಲ್ಲಿ ಸಸಿ ನೆಡುವ ಕಾರ್ಯಕ್ರಮ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಸಂಸ್ಥೆಯ ಅಧ್ಯಕ್ಷ ಅಶೋಕ ಅಕ್ಕಿ ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಪರಿಸರ ಸಂರಕ್ಷಣೆ ಇಂದಿನ ಅಗತ್ಯವಾಗಿದ್ದು, ಮರಗಳನ್ನು ಬೆಳೆಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಪರಿಸರ ನಾಶದಿಂದ ಎದುರಾಗುವ ದುಷ್ಪರಿಣಾಮಗಳನ್ನು ಮನಗಂಡು ಹೆಚ್ಚಿನ ಸಂಖ್ಯೆಯಲ್ಲಿ ಸಸಿ ನೆಟ್ಟು ಅವುಗಳನ್ನು ಪೋಷಿಸಬೇಕು ಎಂದು ಕರೆ ನೀಡಿದರು. ಸಂಸ್ಥೆಯ ಕಾರ್ಯದರ್ಶಿ ಸಂತೋಷ ಎ. ಅಕ್ಕಿ ಮಾತನಾಡಿ, ಶಾಲಾ ಆವರಣದಲ್ಲಿ ವಿವಿಧ ಜಾತಿಯ ಸಸಿಗಳನ್ನು ನೆಡಲಾಗಿದ್ದು, ಅವುಗಳ ಸಂರಕ್ಷಣೆ ಎಲ್ಲರ ಕರ್ತವ್ಯವಾಗಿದೆ.

ವಿದ್ಯಾರ್ಥಿಗಳಲ್ಲಿ ಪರಿಸರದ ಬಗ್ಗೆ ಜಾಗೃತಿ ಮೂಡಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದು ತಿಳಿಸಿದರು. ಇದೇ ವೇಳೆ ನೆಟ್ಟ ಸಸಿಗಳನ್ನು ಸಂರಕ್ಷಿಸುವ ಪ್ರತಿಜ್ಞೆಯನ್ನೂ ಬೋಧಕವಿದ್ಯಾರ್ಥಿಗಳು ಕೈಗೊಂಡರು.

ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಅಧ್ಯಕ್ಷ ಪ್ರದೀಪ್ ಉಗಲಾಟ, ಕಾರ್ಯಾಧ್ಯಕ್ಷ ಅಕ್ಷಯ ಶೆಟ್ಟಿ, ಇನ್ನರ್‌ವ್ಹೀಲ್ ಕ್ಲಬ್ ಅಧ್ಯಕ್ಷೆ ಮಂಜುಳಾ ಅಕ್ಕಿ, ಕಾರ್ಯಾಧ್ಯಕ್ಷೆ ಪೂಜಾ ಭೂಮಾ, ರೋಟ್ರ್ಯಾಕ್ಟ್ ಕ್ಲಬ್ ಸದಸ್ಯರು, ವಿಜಯ ಲಲಿತ ಕಲಾ ಕಾಲೇಜಿನ ಪ್ರಾಚಾರ್ಯ ಸಿ.ವಿ.ಬಡಿಗೇರ, ವಿಜಯ ಪಿಯು ಕಾಲೇಜಿನ ಪ್ರಾಚಾರ್ಯೆ ಶಿಲ್ಪಾ ಮಲ್ಲಾಪೂರ, ವಿಜಯ ಶಾಲೆಯ ಪ್ರಧಾನಗುರು ಎಂ.ಎಸ್. ಹುಲ್ಲೂರ, ಶಿಕ್ಷಕಶಿಕ್ಷಕಿಯರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಕಾರ್ಯಕ್ರಮದ ಕೊನೆಯಲ್ಲಿ ವಿದ್ಯಾರ್ಥಿಗಳು, ಅವರ ಪಾಲಕರು ಹಾಗೂ ಶಿಕ್ಷಕರಿಗೆ ಸಸಿಗಳನ್ನು ವಿತರಿಸಿ ಪರಿಸರ ಸಂರಕ್ಷಣೆಯ ಸಂದೇಶ ಸಾರಲಾಯಿತು.

### ಅರಳಹಳ್ಳಿಯ ರಾಜರಾಜೇಶ್ವರಿ ಬ್ರಹನ್ಮಠದಲ್ಲಿ ಭಾವಪೂರ್ಣ ಸಂಗೀತ ಕಾರ್ಯಕ್ರಮ

# ಗುರುಪೌರ್ಣಿಮೆಗೆ ಸಂಗೀತ ಸಂಜೆ ಸಂಭ್ರಮ



**ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಬಸವಾನಂದ ಸಾಂಸ್ಕೃತಿಕ ಸೇವಾ ಸಂಸ್ಥೆ, ಹರ್ಲಾಪೂರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಅರಳಹಳ್ಳಿಯ ಶ್ರೀ ರಾಜರಾಜೇಶ್ವರಿ ಬ್ರಹನ್ಮಠದಲ್ಲಿ ಗುರುಪೌರ್ಣಿಮೆ ಅಂಗವಾಗಿ 'ಸಂಗೀತ ಸಂಜೆ' ಕಾರ್ಯಕ್ರಮ ಭಕ್ತಿಭಾವದಿಂದ ನಡೆಯಿತು.

ಕಾರ್ಯಕ್ರಮದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಪೂಜ್ಯ ಶ್ರೀ ಬಸವರಾಜ ಸ್ವಾಮೀಜಿ, ಸಂಗೀತವು ಮನಸ್ಸಿಗೆ ನೆಮ್ಮದಿ ಮತ್ತು ಆನಂದ ನೀಡುವ ದೈವಿಕ ಕಲೆಯಾಗಿದ್ದು, ಗುರು-ಶಿಷ್ಯ ಪರಂಪರೆಯೇ ಭಾರತೀಯ ಸಂಗೀತದ ಜೀವಾಳವಾಗಿದೆ ಎಂದು ಹೇಳಿದರು.

ಪಂ. ಪಂಚಾಕ್ಷರಿ ಗವಾಯಿಗಳು ಹಾಗೂ ಪಂ. ಪುಟ್ಟರಾಜ ಗವಾಯಿಗಳು ಗದುಗನ್ನು ಸಂಗೀತದ ಕಾಶಿಯನ್ನಾಗಿ ರೂಪಿಸಿದ್ದು, ಗುರುಪೌರ್ಣಿಮೆ ದಿನವು ಗುರುಗಳಿಗೆ ಕೃತಜ್ಞತೆ ಸಲ್ಲಿಸುವ ಪವಿತ್ರ ದಿನವಾಗಿದೆ. ಗುರು ಎಂದರೆ ಅಜ್ಞಾನವನ್ನು ದೂರ ಮಾಡಿ ಜ್ಞಾನದ ಬೆಳಕು ನೀಡುವವರು ಎಂದು ಅವರು ತಿಳಿಸಿದರು.

ಗುರುಪೌರ್ಣಿಮೆಯ ಧಾರ್ಮಿಕ, ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಮಹತ್ವವನ್ನು ವಿವರಿಸಿದ ಅವರು, ವೇದವ್ಯಾಸ ಮಹರ್ಷಿ, ಗೌತಮ ಬುದ್ಧ ಹಾಗೂ ಯೋಗ ಪರಂಪರೆಯಲ್ಲಿ ಗುರುಪೂಜೆಯ ಮಹತ್ವವನ್ನು ಉಲ್ಲೇಖಿಸಿ, ಭಾರತೀಯ ಶಾಸ್ತ್ರೀಯ ಸಂಗೀತವು ಗುರು-ಶಿಷ್ಯ ಪರಂಪರೆಯ ಮೇಲೆ ಬೆಳೆದಿರುವ ಅಪರೂಪದ ಪರಂಪರೆಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮಹಾಂತೇಶ ಸಾಹುಕಾರ ಹೆರೂರು, ಸಂಗೀತವು ಕೇವಲ ಕಲೆಯಲ್ಲ, ಬದುಕಿನ ದರ್ಶನವಾಗಿದೆ. ಸಂಗೀತವನ್ನು ಜೀವನದ ಭಾಗವಾಗಿಸಿಕೊಂಡವರು ಬದುಕಿನ ಸಾರ್ಥಕತೆಯನ್ನು ಅರಿಯುತ್ತಾರೆ ಎಂದು ಹೇಳಿದರು.

ಕಾರ್ಯಕ್ರಮದ ಕೊನೆಯಲ್ಲಿ ಶ್ರೀ ಗುರು ಬಸವಾನಂದ ಸಾಂಸ್ಕೃತಿಕ ಸೇವಾ ಸಂಸ್ಥೆಯ ಕಾರ್ಯದರ್ಶಿ ಸದಾನಂದ ಶಾಸ್ತ್ರಿಗಳು ವಂದಿಸಿದರು.

### ಗುರುಪೌರ್ಣಿಮೆ ಅಂಗವಾಗಿ ರಕ್ತದಾನ ಶಿಬಿರ

# ರಕ್ತದಾನ ಮಹಾದಾನದ ಸಂದೇಶ ಸಾರಿದ ಸಾಯಿ ಭಕ್ತರು



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಗುರುಪೌರ್ಣಿಮೆ ಅಂಗವಾಗಿ ಶ್ರೀ ಶಿರಡಿ ಸಾಯಿಬಾಬಾ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಎರಡನೇ ವರ್ಷದ ಸ್ವಯಂಪ್ರೇರಿತ ರಕ್ತದಾನ ಶಿಬಿರ ಹಾಗೂ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಪಟ್ಟಣದ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಶುಕ್ರವಾರ ಯಶಸ್ವಿಯಾಗಿ ಆಯೋಜಿಸಲಾಯಿತು.

ವಿಜಯನಗರ ಜಿಲ್ಲಾ ಆರೋಗ್ಯ ಕೇಂದ್ರ, ತಾಲೂಕು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಜಯನಗರ ರಕ್ತ ಕೇಂದ್ರ ಹಾಗೂ ಸ್ವಾಮಿ ವಿವೇಕಾನಂದ ರಕ್ತ ಕೇಂದ್ರದ ಸಹಯೋಗದಲ್ಲಿ ನಡೆದ ಶಿಬಿರದಲ್ಲಿ ಹಗರಿಬೊಮ್ಮನಹಳ್ಳಿ, ಅರಳಿಹಳ್ಳಿ, ಕುರುದುಗಡ್ಡಿ, ರಾಮನಗರ ಸೇರಿದಂತೆ ವಿವಿಧ ಗ್ರಾಮಗಳ ಭಕ್ತರು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಭಾಗವಹಿಸಿ ರಕ್ತದಾನ ಮಾಡಿದರು.

ಬೆಳಿಗ್ಗೆ 9.30ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಡೆದ ಶಿಬಿರದಲ್ಲಿ ಆರೋಗ್ಯ ತಪಾಸಣೆಯೂ ನಡೆಸಲಾಯಿತು. ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಿದ ದಾನಿಗಳಿಗೆ ಟ್ರಸ್ಟ್ ವತಿಯಿಂದ ಕೃತಜ್ಞತೆ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿ, ರಕ್ತ ಕೇಂದ್ರದ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಸಾಯಿಬಾಬಾ ಮಂದಿರದ ಭಕ್ತರು, ಸೇವಕರು ಹಾಗೂ ಆಡಳಿತ ಮಂಡಳಿಯ ಸದಸ್ಯರು ಶಿಬಿರದ ಯಶಸ್ಸಿಗೆ ಸಹಕರಿಸಿದರು.

ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆ ಅಧಿಕಾರಿಗಳಾದ ಮಲ್ಲಿಕಾರ್ಜುನ, ಯಮುನಾ, ಪ್ರಮೋದಿನಿ, ಹನುಮಂತಮ್ಮ, ವಿಜಯಕುಮಾರ, ಪೂಜಾ, ರೇಖಾ, ಆಶಾ ಕಾರ್ಯಕರ್ತೆಯರಾದ ಎಸ್. ಮಂಜುಳಾ, ಎಂ. ಗಿರಿಜಾ, ಹೆಚ್. ಮಂಜುಳಾ, ವಿ. ಶಿವಮ್ಮ, ಸ್ವಾಮಿ ವಿವೇಕಾನಂದ ರಕ್ತ ಕೇಂದ್ರದ ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

### ವಿಡಿಎಸ್ ಕ್ಲಾಸಿಕ್ ಸಿಬಿಎಸ್‌ಇ ಶಾಲೆಯಲ್ಲಿ ಗುರುಪೌರ್ಣಿಮೆ ಸಂಭ್ರಮ

# ಗುರುವೇ ಬದುಕಿನ ನಿಜವಾದ ದಾರಿದೀಪ





**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶತಮಾನೋತ್ಸವ ಸಂಭ್ರಮದಲ್ಲಿರುವ ಹಾಗೂ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ವಿದ್ಯಾದಾನ ಸಮಿತಿಯ ವಿಡಿಎಸ್ ಕ್ಲಾಸಿಕ್ ಆಂಗ್ಲ ಮಾಧ್ಯಮ ಸಿಬಿಎಸ್‌ಇ ಶಾಲೆಯಲ್ಲಿ ಗುರುಪೌರ್ಣಿಮೆ ಅಂಗವಾಗಿ ಗುರುಭಕ್ತಿ ಕಾರ್ಯಕ್ರಮವನ್ನು ಶ್ರದ್ಧಾ-ಭಕ್ತಿಯಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಸಮಸ್ತ ಗುರುಗಳಿಗೆ ಗುರು ಕಾಣಿಕೆ ಸಮರ್ಪಿಸಿ, ಭಕ್ತಿಪೂರ್ವಕವಾಗಿ ಗುರುವಂದನೆ ಸಲ್ಲಿಸಿದರು.

ಸಂಸ್ಥೆಯ ನಿರ್ದೇಶಕ ಹಾಗೂ ಶೈಕ್ಷಣಿಕ ಮಾರ್ಗದರ್ಶಕ ಪ್ರತೀಕ ಹುಯಿಲಗೋಳ ಮಾತನಾಡಿ, ಗುರುವಿನ ಮಾರ್ಗದರ್ಶನವೇ ಬದುಕಿನ ಯಶಸ್ಸಿಗೆ ಅಡಿಪಾಯವಾಗಿದ್ದು, ಜ್ಞಾನಕ್ಕಿಂತ ಮಿಗಿಲಾದ ಸಂಪತ್ತು ಮತ್ತೊಂದಿಲ್ಲ ಎಂದು ಹೇಳಿದರು.

ಗುರುಪೌರ್ಣಿಮೆಯ ಮಹತ್ವ, ವ್ಯಾಸ ಮಹರ್ಷಿಗಳ ಕೊಡುಗೆ, ಗುರು-ಶಿಷ್ಯ ಪರಂಪರೆ ಹಾಗೂ ಸ್ವಾಮಿ ವಿವೇಕಾನಂದ, ರಾಮಕೃಷ್ಣ ಪರಮಹಂಸ, ರವೀಂದ್ರನಾಥ ಟ್ಯಾಗೋರ್ ಮತ್ತು ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಬದುಕಿನ ಉದಾಹರಣೆಗಳ ಮೂಲಕ ಗುರುವಿನ ಮಹತ್ವವನ್ನು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಟ್ಟರು. ಗುರು ಇಲ್ಲದ ಗುರಿ ಮುಟ್ಟಿದವರ ಚರಿತ್ರೆ ಇತಿಹಾಸದಲ್ಲೇ ಇಲ್ಲ ಎಂದು ಅವರು ಹೇಳಿದರು. ಶಾಲೆಯ ಪ್ರಾಚಾರ್ಯ ಎಂ.ಆರ್. ಡೊಳ್ಳಿನ ಮಾತನಾಡಿ, ಭಾರತೀಯ ಸಂಸ್ಕೃತಿಯಲ್ಲಿ ಗುರುಗಳಿಗೆ ಅತ್ಯುನ್ನತ ಸ್ಥಾನವಿದ್ದು, ತಂದೆ-ತಾಯಿ ಹಾಗೂ ಗುರುಗಳನ್ನು ಜೀವನದಲ್ಲಿ ಎಂದಿಗೂ ಮರೆಯಬಾರದು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಗುರುಕುಲ ಪದ್ಧತಿಯಿಂದ ಇಂದಿನ ಶಿಕ್ಷಣ ವ್ಯವಸ್ಥೆಯವರೆಗಿನ ಗುರು-ಶಿಷ್ಯ ಸಂಬಂಧದ ಮಹತ್ವವನ್ನು ವಿವರಿಸಿದರು.

ವಿದ್ಯಾರ್ಥಿಗಳಾದ ಅನನ್ಯ ಕುಲಕರ್ಣಿ, ಅನ್ವಿತಾ ಪಾಟೀಲ, ಖುಷಿ ವಡ್ಡಟ್ಟಿ, ಅಮೃತಾ ತಡಸದ, ಭಾನುಶ್ರೀ ಕೆ., ಇಂಜಿಲ್ಲಾ ನದಾಫ್, ಬೀರಪ್ಪ ಇದ್ಲಿ ಹಾಗೂ ಸಾನ್ವಿ ಸೋಮಣ್ಣವರ ಗುರುಪೌರ್ಣಿಮೆಯ ಕುರಿತು ಕವನ ಹಾಗೂ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

ಕಾರ್ಯಕ್ರಮವನ್ನು ವಿದ್ಯಾರ್ಥಿಗಳಾದ ಅರ್ಪಿತಾ ನಿಕ್ಕಂ ಹಾಗೂ ಮಿಸ್ಬಾ ಪಟೇಲ್ ನಡೆಸಿಕೊಟ್ಟರು. ತೇಜಸ್ವಿನಿ ಬಗಾಡೆ ಮತ್ತು ತಂಡ ಪ್ರಾರ್ಥಿಸಿದರು. ಶೈನಾಜ್ ನದಾಫ್ ನಿರೂಪಿಸಿದರು. ವಿದ್ಯಾ ಪಾಟೀಲ ಸ್ವಾಗತಿಸಿ, ಸವಿತಾ ಕುರ್ತಕೋಟಿ ವಂದಿಸಿದರು. ಕಾರ್ಯಕ್ರಮವನ್ನು ವಿದ್ಯಾರ್ಥಿಗಳೇ ಆಯೋಜಿಸಿದ್ದು, ಶಿಕ್ಷಕರು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಗಣ್ಯರು ಭಾಗವಹಿಸಿದ್ದರು.

# ಕಾವೇರಿ ವಿಚಾರವಾಗಿ ಭಾನುವಾರ ಸರ್ವಪಕ್ಷ ಸಭೆ

**ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಕಾವೇರಿ ನೀರಿನ ವಿಚಾರವಾಗಿ ಬರುವ ಭಾನುವಾರ (ಆಗಸ್ಟ್ 2) ಗೃಹ ಕಚೇರಿ ಕೃಷ್ಣಾದಲ್ಲಿ ಸರ್ವಪಕ್ಷ ಸಭೆ ಕರೆಯಲಾಗಿದೆ. ರಾಜ್ಯದ ಮಾಜಿ ಮುಖ್ಯಮಂತ್ರಿಗಳು, ಕಾವೇರಿ ಜಲಾನಯನ ಪ್ರದೇಶದ ಸಂಸದರು, ಶಾಸಕರಿಗೆ ಆಹ್ವಾನ ನೀಡಲಾಗಿದೆ ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು. ದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯೆ ನೀಡಿದರು. ಇಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ (ಇಗಖಅ) ಮುಂದೆ ಮೇಲ್ಮನವಿ ಸಲ್ಲಿಸಿದ್ದು, ಮುಂದೆ ಈ ವಿಚಾರವನ್ನು ಹೇಗೆ ತೆಗೆದುಕೊಂಡು ಹೋಗಬೇಕು ಎಂದು ಸರ್ವಪಕ್ಷ ಸಭೆಯಲ್ಲಿ ಚರ್ಚೆ ಮಾಡಲಾಗುವುದು. ಈ ವಿಚಾರವಾಗಿ ಸಂಸದರು, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಷಿ, ಸೋಮಣ್ಣ, ಜಗದೀಶ್ ಶೆಟ್ಟರ್, ಬೊಮ್ಮಾಯಿ ಅವರ ಜೊತೆ ಚರ್ಚೆ ಮಾಡಿದ್ದು, ಅವರು ರಾಜ್ಯದ ಹಿತಕ್ಕಾಗಿ ಶಕ್ತಿ ಮೀರಿ ಪ್ರಯತ್ನ ಮಾಡುತ್ತಿದ್ದಾರೆ ಎಂದು ತಿಳಿಸಿದರು.

